ಸಂಪುಟ 01 । ಸಂಚಿಕೆ 192 ಬುಧವಾರ 16 ಸೆಪ್ಟೆಂಬರ್ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

ಈ ದಿನದ ವಿಶೇಷ

1) ವಿಶ್ವ ಓಜೋನ್ ದಿನ (World Ozone Day)
ಪ್ರತಿವರ್ಷ ಸೆಪ್ಟೆಂಬರ್ 16ರಂದು ಆಚರಿಸಲಾಗುತ್ತದೆ. ಓಜೋನ್ ಪದರದ ಮಹತ್ವ ಮತ್ತು ಅದನ್ನು ರಕ್ಷಿಸುವ ಅಗತ್ಯದ ಬಗ್ಗೆ ಜಾಗೃತಿ ಮೂಡಿಸುವ ದಿನ.

2)Mayflower Day 2026
Mayflower Day ಅನ್ನು ಪ್ರತಿವರ್ಷ ಸೆಪ್ಟೆಂಬರ್ 16 ರಂದು ಆಚರಿಸಲಾಗುತ್ತದೆ. 2026ರಲ್ಲಿ ಇದು ಬುಧವಾರ, ಸೆಪ್ಟೆಂಬರ್ 16 ರಂದು ಬರುತ್ತದೆ.

ಸುಭಾಷಿತ

ನಿಮ್ಮ ಸುತ್ತಮುತ್ತಲಿನ ವಾತಾವರಣ ಹೇಗೇ ಇರಲಿ, ನಿಮ್ಮ ಪ್ರಾಮಾಣಿಕತೆ ಹಾಗೂ ನೈತಿಕ ಮೌಲ್ಯಗಳನ್ನು ಕಾಯ್ದುಕೊಳ್ಳುವ ಅವಕಾಶ ನಿಮಗೆ ಇದ್ದೇ ಇರುತ್ತದೆ.

-ಎ.ಪಿ.ಜೆ. ಅಬ್ದುಲ್ ಕಲಾಂ

ಹಬ್ಬ ಮುಗಿಸಿ ಬೆಂಗಳೂರಿಗೆ ಮರಳುತ್ತಿದ್ದಾಗ ಸ್ಕೂಟರ್‌ಗೆ ಟ್ಯಾಂಕರ್ ಡಿಕ್ಕಿಯಾಗಿ ಮೂವರು ಸಾವು

❑ ನೈಜ್ಯ ದೇಸೆ ನ್ಯೂಸ್

ಮಂಡ್ಯ: ಗೌರಿ-ಗಣೇಶ ಹಬ್ಬ ಮುಗಿಸಿಕೊಂಡು ಬೆಂಗಳೂರಿಗೆ ಮರುಳುತ್ತಿದ್ದ ವೇಳೆ ಸ್ಕೂಟರ್ ಹಾಲಿನ ಟ್ಯಾಂಕರ್ ಡಿಕ್ಕಿ ಹೊಡೆದ ಪರಿಣಾಮ ಒಂದೇ ಗ್ರಾಮದ ಮೂವರು ಮೃತಪಟ್ಟಿರುವ ಘಟನೆ ಮದ್ದೂರು ತಾಲ್ಲೂಕಿನ ಕೊಪ್ಪ ಬಳಿ ಇಂದು ಬೆಳಗ್ಗೆ ನಡೆದಿದೆ. ಕೊಪ್ಪದ ನಿವಾಸಿಗಳಾದ ಕಾವ್ಯ,ಕೀರ್ತನ ಹಾಗೂ ಮುತ್ತುರಾಜ್ ಮೃತಪಟ್ಟ ದುರ್ದೈವಿಗಳು.



ಬೆಂಗಳೂರಿನಲ್ಲಿ ಕೆಲಸ ಮಾಡುತ್ತಿದ್ದ ಮೂವರು ಹಬ್ಬದ ನಿಮಿತ್ತ ಸ್ವಗ್ರಾಮಕ್ಕೆ ಬಂದಿದ್ದರು. ಸಂಭ್ರಮದಿಂದ ಹಬ್ಬ ಮುಗಿಸಿಕೊಂಡು ಇಂದು ಬೆಳಗ್ಗೆ ಮೂವರು ಸ್ಕೂಟರ್‌ನಲ್ಲಿ ಬೆಂಗಳೂ-ರಿನತ್ತಾ ತೆರಳುತ್ತಿದ್ದಾಗ ವೇಗವಾಗಿ ಬಂದ ಹಾಲಿನ ಟ್ಯಾಂಕರ್ ಸ್ಕೂಟ-ರ್‌ಗೆ ಡಿಕ್ಕಿ ಹೊಡೆದಿದೆ. ಈ ವೇಳೆ ಮೂವರು ರಸ್ತೆ ಮೇಲೆ ಬಿದ್ದಿದ್ದು, ತೀವ್ರ ರಕ್ತಸ್ರಾವದಿಂದ ಸ್ಥಳದಲ್ಲೇ ದಾರುಣವಾಗಿ ಮೃತಪಟ್ಟಿದ್ದಾರೆಂದು ತಿಳಿದು ಬಂದಿದೆ.ಸುದ್ದಿ ತಿಳಿಯುತ್ತಿದ್ದಂತೆ ಕೊಪ್ಪ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ. ಗ್ರಾಮದಲ್ಲಿ ಸೂತಕ:ನಿನ್ನೆಯಷ್ಟೆ ಇಡೀ ಗ್ರಾಮದಲ್ಲಿ ಗೌರಿ-ಗಣೇಶ ಹಬ್ಬವನ್ನು ಸಂಭ್ರಮದಿಂದ ಆಚ-ರಿಸಿದ್ದರು. ಆದರೆ ಇಂದು ಬೆಳ್ಳಂಬೆಳಗ್ಗೆಯೇ ಗ್ರಾಮಸ್ಥರಿಗೆ ಕಹಿ ಸುದ್ದಿ ಬಂದಿದೆ.ಒಂದೇ ಗ್ರಾಮದ ಮೂವರು ಸಾವನ್ನಪ್ಪಿದ್ದು,

ಧರಣಿ ಯಶಸ್ವಿಗೆ ಎಲ್ಲರ ಸಹಕಾರ ಅಗತ್ಯ: ನಡಹಳ್ಳಿ

❑ ನೈಜ್ಯ ದೇಸೆ ನ್ಯೂಸ್



ತಾಳಿಕೋಟಿ: ಮುದ್ದೇಬಿಹಾಳ,ತಾಳಿಕೋಟಿ ಹಾಗೂ ದೇವರ ಹಿಪ್ಪರಗಿ ಒಳಗೊಂಡು ಇಡೀ ಜಿಲ್ಲೆಯನ್ನು ಬರಪೀಡಿತ ಎಂದು ಘೋಷಿಸುವಂತೆ ಆಗ್ರಹಿಸಿ ಎಪಿಎಂಸಿ ಆವರಣದಲ್ಲಿ ಸಪ್ಟಂಬರ್ 17 ರಿಂದ ಮೂರು ದಿನಗಳ ಕಾಲ ಧರಣಿ ಸತ್ಯಾಗ್ರಹ, ಸೆ.21 ರಂದು ತಾಳಿಕೋಟಿ ಸಂಪೂರ್ಣ ಬಂದ್ ನಡೆಸಲು ಈ ಸಭೆಯಲ್ಲಿ ಎಲ್ಲರ ಬಹುಮತದಿಂದ ನಿರ್ಧಾರ ತೆಗೆದುಕೊಳ್ಳಲಾಗಿದೆ ಇದರ ಯಶಸ್ವಿಗೆ ಎಲ್ಲ ರೈತ ಬಾಂಧವರು ಸಹಕರಿಸಬೇಕು ಎಂದು ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಎ.ಎಸ್.ಪಾಟೀಲ ನಡಹಳ್ಳಿ ಹೇಳಿದರು. ಮಂಗಳವಾರ ಪಟ್ಟಣದ ಎಪಿಎಂಸಿ ಸಭಾಭವನದಲ್ಲಿ ಬರ ಘೋಷಣೆಗೆ ಆಗ್ರಹಿಸಿ ಬೃಹತ್ ಧರಣಿ ಸತ್ಯಾಗ್ರಹ ಹೋರಾಟ ನಡೆಸಲು ಕರೆದ ಬಿಜೆಪಿ ಮತ್ತು ಜೆಡಿ-ಎಸ್ ಪಕ್ಷಗಳ ಜಂಟಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇಡೀ ಜಿಲ್ಲೆಯಲ್ಲಿ ಭೀಕರ ಬರಗಾಲದಿಂದ ರೈತರು ಕಂಗೆಟ್ಟಿ ಹೋಗಿದ್ದಾರೆ. ಅದರಲ್ಲಿಯೂ ಮುದ್ದೇಬಿಹಾಳ ಮತಕ್ಷೇತ್ರದ ಎರಡು ತಾಲೂಕುಗಳು ಹಾಗೂ ದೇವರಹಿಪ್ಪರಗಿ ತಾಲೂಕು ಬರಗಾಲದಿಂದ ಅತಿ ಹೆಚ್ಚು ಪ್ರಭಾವಿತವಾಗಿವೆ, ಸರ್ಕಾರ ಇಲ್ಲಿಯವರೆಗೆ ಬರ ಘೋಷಣೆ ಮಾಡದೆ ನಮ್ಮ ರೈತರಿಗೆ ಭಾರಿ ಅನ್ಯಾಯ ಮಾಡುತ್ತಿದೆ. ಸರ್ಕಾರದ ಈ ಕೆಟ್ಟ ಧೋರಣೆಯನ್ನು ವಿರೋಧಿಸಿ ಉಗ್ರವಾದ ಹೋರಾಟವನ್ನು ನಡೆಸುವುದು ಅನಿವಾರ್ಯವಾಗಿದೆ.

ಆದ್ದರಿಂದ ಬಿಜೆಪಿ ಮತ್ತು ಜೆಡಿ-ಎಸ್ ಪಕ್ಷಗಳ ಜಂಟಿ ನೇತೃತ್ವದಲ್ಲಿ ಎಲ್ಲಾ ರೈತಪಿ ಜನರ ಸಹಕಾರದೊಂದಿಗೆ ಸೆಪ್ಟೆಂಬರ್ 17 ರಿಂದ ತಾಳಿಕೋಟಿ ಪಟ್ಟಣದ ಎಪಿಎಂಸಿ ಆವರಣದಲ್ಲಿ ಧರಣಿ ಸತ್ಯಾಗ್ರಹ ಆರಂಭಿಸಲಾಗುವುದು ನಂತರ ಸೆ.21ರಂದು ಸುಮಾರು ಹತ್ತು ಸಾವಿರ ರೈತರನ್ನು ಸೇರಿಸಿ ಬೃಹತ್ ಪ್ರತಿಭಟನೆ ನಡೆಸಿ ತಾಳಿಕೋಟಿ ಸಂಪೂರ್ಣ ಬಂದ್ ಆಚರಿಸಲಾಗುವುದು ಇದಕ್ಕೆ ಎಲ್ಲರೂ ಸಹಕಾರ ನೀಡಬೇಕೆಂದು ತಿಳಿಸಿದರು. ದೇವರ ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ ಮಾತನಾಡಿ ಈ ಹೋರಾಟ ರೈತರ ಹೋರಾಟವಾಗಿದ್ದು ಪಕ್ಷಾತೀತವಾಗಿರುವುದು. ಬರ ಘೋಷಣೆಯಲ್ಲಿ ರಾಜ್ಯ ಸರ್ಕಾರ ಭಾರಿ ತಾರತಮ್ಯ ಮಾಡಿದೆ, ಹಿಂದೆ ಮಾಜಿ ಮುಖ್ಯಮಂತ್ರಿಗಳಾದ ಕುಮಾರಸ್ವಾಮಿಯವರು ಬರಗಾಲದ ಸ್ಥಿತಿಯಲ್ಲಿ ರೈತರ ಸಾಲ ಮನ್ನಾ ಮಾಡಿ ಪರಿಹಾರವನ್ನು ಘೋಷಿಸಿದ್ದರು. ಆದರೆ ಈ ಸರ್ಕಾರ ಮಾತ್ರ ಇನ್ನೂ ಮೀನ ಮೇಷ ಎಣಿಸುತ್ತಿದೆ, ಇದು ಆಳುವ ಪಕ್ಷದ ಇಚ್ಛಾಶಕ್ತಿಯ ಕೊರತೆಯನ್ನು ತೋರಿಸುತ್ತದೆ, ಸರ್ಕಾರ ಈಗಲಾದರೂ ಎಚ್ಚೆತ್ತುಕೊಳ್ಳುವ ಅವಶ್ಯಕತೆವಿದೆ.

ಸಂಕಷ್ಟದಲ್ಲಿರುವ ರೈತರ ಸಹಾಯಕ್ಕೆ ಸರ್ಕಾರ ಬರಬೇಕು ಇದು ಅವರ ಕರ್ತವ್ಯವಾಗಿದೆ, ಸಪ್ಟಂಬರ್ 21ರಿಂದ ಕರೆದ ಮೂರು ದಿನಗಳ ವಿಶೇಷ ಅಧಿವೇಶನದಲ್ಲಿ ಇದರ ಕುರಿತು ನಾನು ಸದನದಲ್ಲಿ ಬಾವಿಗಿಳಿದು ಹೋರಾಟವನ್ನು ನಡೆಸುತ್ತೇನೆ. ನಡವಳ್ಳಿಯವರ ನೇತೃತ್ವದಲ್ಲಿ ನಡೆಯುವ ಈ ಹೋರಾಟಕ್ಕೆ ನಾವೆಲ್ಲರೂ ಕೈಜೋಡಿಸೋಣ ಎಂದರು. ಮಾಜಿ ಶಾಸಕ ಸೋಮನಗೌಡ ಪಾಟೀಲ(ಸಾಸನೂರ) ಮಾತನಾಡಿ ಈ ಹೋರಾಟವನ್ನು ಪ್ರಭಾವಪೂರ್ಣವಾಗಿ ಮಾಡಲು ಎರಡೂ ಮತಕ್ಷೇತ್ರದಲ್ಲಿರುವ ನಮ್ಮ

4ನೇ ಪುಟಕ್ಕೆ

'ಸಿದ್ದರಾಮಯ್ಯ ಶಾಶ್ವತ ಸಿಎಂ': ಮೈಸೂರಿನಲ್ಲಿ ಮೊಳಗಿದ ಕಾಂಗ್ರೆಸ್ ಕಾರ್ಯಕರ್ತರ ಬೃಹತ್ ಘೋಷಣೆ!

❑ ನೈಜ್ಯ ದೇಸೆ ನ್ಯೂಸ್



ತಾಂಡವಪುರ: ಸಿದ್ದರಾಮಯ್ಯ ರವರು ಶಾಶ್ವತ ಮುಖ್ಯಮಂತ್ರಿ ಎಂದು ಮೈಸೂ-ರಿನಲ್ಲಿ ಮೊಳಗಿದ ಘೋಷಣೆ ಕೂಗಿದ ಕಾಂಗ್ರೆಸ್ ಕಾರ್ಯಕರ್ತರು ಮುಖಂಡರು

ಅವರು ಇಂದು ಮಾಜಿ ಮುಖ್ಯಮಂತ್ರಿ ಹಾಗೂ ಹಿರಿಯ ಕಾಂಗ್ರೆಸ್ ನಾಯಕ ಸಿದ್ದರಾಮಯ್ಯ ಅವರು ಮೈಸೂರು ನಗರದಲ್ಲಿರುವ ಕಾಂಗ್ರೆಸ್ ಭವನ ಕಟ್ಟಡ ನಿರ್ಮಾಣ ವೀಕ್ಷಣೆಗೆ ಭೇಟಿ ನೀಡಿ, ರೈಲ್ವೆ ನಿಲ್ದಾಣದ ಬಳಿ ಅತ್ಯಂತ ಪ್ರತಿಷ್ಠಿತವಾಗಿ ನಿರ್ಮಾಣವಾಗುತ್ತಿರುವ ನೂತನ ಕಾಂಗ್ರೆಸ್ ಕಚೇರಿ (ಇಂದಿರಾ ಕಾಂಗ್ರೆಸ್ ಭವನ) ಕಟ್ಟಡದ ಕಾಮಗಾರಿಯನ್ನು ನೇರವಾಗಿ ಸ್ಥಳದಲ್ಲೇ ಪರಿಶೀಲಿಸಿ ಕಾಮಗಾರಿ ಪ್ರಗತಿಯ ಬಗ್ಗೆ ಮಾಹಿತಿ ಪಡೆದುಕೊಂಡರು ಮೈಸೂರಿನಲ್ಲಿ ಕಾಂಗ್ರೆಸ್‌ಗೆ ದೀರ್ಘಕಾಲದ ಬಳಿಕ ತನ್ನದೇ ಆದ ಸ್ವಂತ ಕಚೇರಿ ರೂಪುಗೊಳ್ಳುತ್ತಿದ್ದು, ಕಾಮಗಾರಿಯ ಪ್ರಗತಿ ಹಾಗೂ ಗುಣಮಟ್ಟದ ಬಗ್ಗೆ ಸ್ಥಳದಲ್ಲಿದ್ದ ಇಂಜಿನಿಯರ್‌ಗಳು ಹಾಗೂ ಪಕ್ಷದ ಪ್ರಮುಖರೊಂದಿಗೆ ಸಿದ್ದರಾಮಯ್ಯ ಚರ್ಚೆ ನಡೆಸಿದರು.

ಈ ಸಂದರ್ಭದಲ್ಲಿ ಮೈಸೂರು ನಗರ ಹಾಗೂ ಗ್ರಾಮಾಂತರ ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾದ ಡಾ. ಬಿಜೆ ವಿಜಯಕುಮಾರ್ ಬೀರಿಗುಂಡಿ ಬಸವಣ್ಣ ಆರ್ ಮೂರ್ತಿ ಶಾಸಕರಾದ ತನ್ವೀರ್ ಸೇಟ್ ಕೆ ಹರೀಶ್ ಗೌಡ ಡಾ ಡಿ ತಿಮ್ಮಯ್ಯ ಹಾಗೂ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಮುಖಂಡರು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವ-ರಿಗೆಅದ್ದೂರಿ ಸ್ವಾಗತ ಕೋರಿದರು. ಈ ವೇಳೆ ಮೈಸೂರು ಜಿಲ್ಲಾ ಕಾಂಗ್ರೆಸ್ ಮಾಜಿ ಜಿಲ್ಲಾಧ್ಯಕ್ಷ ಬಿ.ಜೆ. ವಿಜಯಕುಮಾರ್ ನೂತನ ಜಿಲ್ಲಾಧ್ಯಕ್ಷ ಬೀರಿಹುಂಡಿ ಬಸವಣ್ಣ ಶಾಸಕರಾದ ಕೆ ಹ-ರೀಶ್ ಗೌಡ ತನ್ವೀರ್ ಸೇಟ್ ಆರ್ ಮೂರ್ತಿ ಮುಖಂಡರಾದ ಶಿವಣ್ಣ ಮಾಜಿ ಶಾಸಕ ಎಂ ಕ ಸೋಮಶೇಖರ್ ಕಾಂಗ್ರೆಸ್ ಮುಖಂಡರಾದ ಎಂ ಸಿ ಹುಂಡಿ ಶಿವಪ್ರಸಾದ್ ಸಕಳ್ಳಿ ಬಸವರಾಜು ಗೋಪಿ ಸೇರಿದಂತೆ ನೂರಾರು ಅಭಿಮಾನಿಗಳು ಹಾಗೂ ಕಾರ್ಯಕರ್ತರು ಹಾಜರಿದ್ದು ಸಿದ್ದರಾಮಯ್ಯ ಅವರಿಗೆ ಸನ್ಮಾನ ಮಾಡುವ ವೇಳೆ 'ಶಾಶ್ವತ ಮುಖ್ಯಮಂತ್ರಿ ಸಿದ್ದರಾಮಯ್ಯ' ಎಂದು ಜೋರಾಗಿ ಘೋಷಣೆಗಳನ್ನು ಕೂಗುವ ಮೂಲಕ ತಮ್ಮ ಅಭಿಮಾನವನ್ನು ಮೆರೆದರು. ಮೈಸೂರಿನಲ್ಲಿ ನಡೆದ ಕಾಂಗ್ರೆಸ್ ಕಚೇರಿ ಕಾಮಗಾರಿ ಪರಿಶೀಲನೆ ವೇಳೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸನ್ಮಾನಿಸಿ ಗೌರವಿಸಿ ಸಂಭ್ರಮಿಸಿದರು

ವಕ್ರತುಂಡ' ಚಿತ್ರದ ಧಮಾಕಾ : 'ಜೈ ಗಣೇಶ' ಟೈಟಲ್ ಟ್ಯಾಂಕ್ ಸಾಂಗ್ ಭರ್ಜರಿ ಸದ್ದು

❑ ನೈಜ್ಯ ದೇಸೆ ನ್ಯೂಸ್

ಬೆಂಗಳೂರ; ಗೌರಿ-ಗಣೇಶ ಹಬ್ಬದ ಸಡಗರದಲ್ಲಿರುವ ಸಿನಿರಸಿಕರಿಗೆ ಬಹುನಿರೀಕ್ಷಿತ ಕನ್ನಡ ಚಲನಚಿತ್ರ 'ವಕ್ರತುಂಡ' ಚಿತ್ರ ತಂಡವು ಭರ್ಜರಿ ಹಬ್ಬದ ಗಿಫ್ಟ್ ನೀಡಿದೆ. ಚಿತ್ರದ ಹೈ-ಎನರ್ಜಿ ಮತ್ತು ಭಕ್ತಿಭಾವದ ವಿಡಿಯೋ ಟೈಟಲ್ ಟ್ಯಾಂಕ್ ಸಾಂಗ್ 'ಜೈ ಗಣೇಶ' ಬಿಡುಗಡೆಯಾಗಿ ಭರ್ಜರಿ ಸದ್ದು ಮಾಡುತ್ತಿದೆ.



ಲೋಚನ್ ಕಂಬೈನ್ಸ್ ಬ್ಯಾನರ್ ಅಡಿಯಲ್ಲಿ ಅತ್ಯಂತ ಅದ್ದೂರಿಯಾಗಿ ಮೂಡಿಬಂದಿರುವ ಈ ಹಾಡಿಗೆ ಪ್ರತಿಭಾವಂತ ಸಂಗೀತ ನಿರ್ದೇಶಕ ಜೇಮ್ಸ್ ಆರ್ಕಿಟೆಕ್ಟ್ ಮಾಸ್ ಮತ್ತು ಕ್ಲಾಸ್ ಶೈಲಿಯಲ್ಲಿ ರಾಗಸಂಂ-ಯೋಜನೆ ಮಾಡಿದ್ದಾರೆ. ಹಬ್ಬದ ಜೋಶ್ ಹೆಚ್ಚಿಸುವ ಸಾಹಿತ್ಯವನ್ನು ರಾಘವ ರಂಜನ್ ಬರೆದಿದ್ದು, ಖ್ಯಾತ ಗಾಯಕ ಶಶಾಂಕ್ ಶೇಷಗಿರಿ ಹಾಡಿಗೆ ಜೀವ ತುಂಬಿದ್ದಾರೆ. ಮಾಸ್ಟರ್ ಕೊರಿಯೋಗ್ರಾಫರ್ ಕಂಬಿ ರಾಜು ಅವರ ನೃತ್ಯ ನಿರ್ದೇಶನದಲ್ಲಿ, ಛಾಯಾಗ್ರಾಹಕ ಜೈ ಆನಂದ ಅವರ ಛಾಯಾಗ್ರಹಣದಲ್ಲಿ ಮೂಡಿಬಂದಿರುವ ಈ ವಿಡಿಯೋ ಸಾಂಗ್ ವೀಕ್ಷಕರಿಗೆ ಹಬ್ಬದ ನಿಜವಾದ ಕಿಕ್ ನೀಡುತ್ತಿದೆ.

ಎಡಿಟರ್ ರವಿ ತೇಜ ಸಂಕಲನ ಹಾಡಿನ ಮೆರುಗನ್ನು ಹೆಚ್ಚಿಸಿದೆ. ಪ್ರತಿಭಾವಂತ ನಿರ್ದೇಶಕ ಹರೀಶ್ ಕುಂದುರ್ ಆಕ್ಷನ್ ಕಟ್ ಹೇಳಿರುವ ಈ ಚಿತ್ರಕ್ಕೆ ಈ ಹಿಂದೆ ನೈಂಟಿ-ಕುಡಿ ಪಲ್ಟಿ ಹೊಡಿ, ದೇವರಾಣೆ, ಸಿಗರೇಟ್ ಸೇದ್ಬೇಡಿ. ಜಿಲೇಬಿ ಚಿತ್ರಗಳನ್ನು ನಿರ್ಮಿಸಿದ್ದ ಲಕ್ಕಿ ಶಂಕರ್ (ಶಂಕರ್ ಎಸ್) ಕಥೆ ಬರೆದು ನಿರ್ಮಾಣ ಮಾಡಿದ್ದು, ಉಮೇಶ್ ಬಿ.ಹೆಚ್. ದಾವಣಗೆರೆ ಸಹ-ನಿರ್ಮಾಪಕರಾಗಿದ್ದಾರೆ. ಜೊತೆಗೆ ನಾಗೇಂದ್ರ, ಡಾ. ಪ್ರಭು ಗಂಜಿಹಾಳ್, ಡಾ. ವೀರೇಶ್ ಹಂಡಿಗಿ ಪಿ.ಆರ್‌ಓ ಆಗಿದ್ದಾರೆ.

ಮೈಸೂರಿನ ಕಲಾಮಂದಿರದಲ್ಲಿ ಜಿಲ್ಲಾಡಳಿತದ ವತಿಯಿಂದ "ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ

❑ ನೈಜ್ಯ ದೇಸೆ ನ್ಯೂಸ್

ತಾಂಡವಪುರ: ಮೈಸೂರಿನ ಕಲಾಮಂದಿರದಲ್ಲಿ ಜಿಲ್ಲಾಡಳಿತದ ವತಿಯಿಂದ "ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಆಚರಿಸಲಾಯಿತು" ಕಾರ್ಯಕ್ರಮವನ್ನು ಉದ್ಘಾಟಿಸಿ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ "ಯುವ ಸಂಸತ್ತು" ಸ್ಪರ್ಧೆಗಳಿಗೆ ಚಾಲನೆ ನೀಡಿ ಮಾತನಾಡಿದ ಹಿರಿಯ ಪತ್ರಕರ್ತರು ಹಾಗೂ ವಿಧಾನ ಪರಿಷತ್ ಸದಸ್ಯರು ಆದ ಕೆ ಶಿವಕುಮಾರ್ ಅವರು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರೇ ಪ್ರಮುಖರಾಗಿದ್ದು,



ಹದಿನೆಂಟು ವರ್ಷ ಮೇಲ್ಪಟ್ಟ ಪ್ರತಿಯೊಬ್ಬ ನಾಗರಿಕನಿಗೂ ಮತದಾನದ ಹಕ್ಕು ಇದೆ. ಜನರ ಮತದಾನದ ಮೂಲಕವೇ ಜನಪ್ರತಿನಿಧಿಗಳ ಆಯ್ಕೆ ನಡೆಯುತ್ತಿದ್ದು, ಮತದಾನ ಮತ್ತು ಜನರ ಭಾಗವಹಿಸುವಿಕೆಯೇ ಪ್ರಜಾಪ್ರಭುತ್ವದ ಶಕ್ತಿಯಾಗಿದೆ. ಭಾರತವು ವಿಶ್ವದ ಅತಿ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರ. ಮಹಾತ್ಮ ಗಾಂಧೀಜಿ, ಡಾ. ಬಿ.ಆರ್. ಅಂಬೇಡ್ಕರ್, ಜವಾಹರಲಾಲ್ ನೆಹರು, ಸರ್ದಾರ್ ವಲ್ಲಭಭಾಯಿ ಪಟೇಲ್ ಸೇರಿದಂತೆ ಅನೇಕ ಮಹನೀಯರ ಹೋರಾಟದಿಂದ ಪ್ರಜಾಪ್ರಭುತ್ವದ ಅಡಿಪಾಯ ಗಟ್ಟಿಯಾಗಿದೆ. ಎಂದು ಕೆ ಶಿವಕುಮಾರ್ ಅವರು ಹೇಳಿದರು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಬಲಪಡಿಸುವುದು, ಹಕ್ಕುಗಳ ಜತೆಗೆ ಕರ್ತವ್ಯಗಳನ್ನು ಅರಿತುಕೊಳ್ಳುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾ-ರಿಯಾಗಿದೆ. ಯುವಜನರು ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಮಹತ್ವವನ್ನು ಅರಿತು ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕು ಎಂದು ಕೆ ಶಿವಕುಮಾರ್ ಅವರು ಕರೆ ನೀಡಿದರು ಕಾರ್ಯಕ್ರಮದಲ್ಲಿ ಮಾಜಿ ಮೇಯರ್ ಪುರುಷೋತ್ತಮ್ , ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಲೋಕೇಶ್ ಅಪರ ಜಿಲ್ಲಾಧಿಕಾರಿಗಳಾದ ಐಶ್ವರ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆಯ ಉಪ ನಿರ್ದೇಶಕರಾದ ಉದಯ್ ಕುಮಾರ್ , ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ರಂಗೇಗೌಡ ಮುಖಂಡರಾದ ಅಹಿಂದ ಜವರಪ್ಪ ಸೇರಿದಂತೆ ಹಲವು ಗಣ್ಯ ವ್ಯಕ್ತಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು

ಜೋಳ ಬೆಳೆಗಾರರ ಬಾಕಿ ಹಣ, ಬರ ಪರಿಹಾರ ಬಿಡುಗಡೆಗೆ ಆಗ್ರಹ

ರೈತರ ಅನಿರ್ದಿಷ್ಟಾವಧಿ ಪ್ರತಿಭಟನೆಗೆ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಬೆಂಬಲ

❑ ನೈಜ್ಯ ದೇಸೆ ನ್ಯೂಸ್

ಮಾನ್ವಿ : ತಾಲೂಕಿನ ಪೋತ್ನಾಳ ಗ್ರಾಮದಲ್ಲಿ ರೈತಪರ ಸಂಘಟನೆಗಳ ಒಕ್ಕೂಟ ಹಾಗೂ ಜೋಳ ಬೆಳೆಗಾರರ ಒಕ್ಕೂಟದ ವತಿಯಿಂದ ಹಮ್ಮಿಕೊಂಡಿರುವ ಅನಿರ್ದಿಷ್ಟಾವಧಿ ಪ್ರತಿಭಟನೆಯಲ್ಲಿ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಅವರು ಭಾಗವಹಿಸಿ ರೈತರ ಹೋರಾಟಕ್ಕೆ ಬೆಂಬಲ ಸೂಚಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸರ್ಕಾರ ಖರೀದಿಸಿರುವ ಜೋಳದ ಬಾಕಿ ಹಣವನ್ನು ಇದುವರೆಗೂ ರೈತರಿಗೆ ಪಾವತಿಸದೇ ಇರುವುದರಿಂದ ರೈತರು ತಮ್ಮ ಕೆಲಸ ಕಾರ್ಯಗಳನ್ನು ಬಿಟ್ಟು ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಜೋಳ ಬೆಳೆಗಾರರ ಬಾಕಿ ಹಣವನ್ನು ಕೂಡಲೇ ರೈತರ ಖಾತೆಗಳಿಗೆ ಜಮೆ ಮಾಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು. ಮಳೆ ಕೊರತೆಯಿಂದ ಮಾನ್ವಿ ಹಾಗೂ ಸಿರವಾರ ತಾಲೂಕುಗಳಲ್ಲಿ ಹತ್ತಿ ಸೇರಿದಂತೆ ಹಲವು ಬೆಳೆಗಳು ಒಣಗಿ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಆದ್ದರಿಂದ ಮಾನ್ವಿ ಮತ್ತು ಸಿರವಾರ ತಾಲೂಕುಗಳನ್ನು ಸಂಪೂರ್ಣ ಬರಪೀಡಿತ ಪ್ರದೇಶಗಳೆಂದು ಘೋಷಿಸಿ, ರೈತರಿಗೆ ಸೂಕ್ತ ಬೆಳೆ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಜಿಲ್ಲಾಧಿಕಾರಿಗಳು, ಪೊಲೀಸ್ ವ-ರಿಷ್ಠಾಧಿಕಾರಿಗಳು ಹಾಗೂ ನೀರಾವರಿ ಇಲಾಖೆಯ ಅಧಿಕಾರಿಗಳು ಕಚೇರಿಗಳಲ್ಲೇ ಕುಳಿತು ಪರಿಸ್ಥಿತಿ ಪರಿಶೀಲಿಸುವ ಬದಲು ಖುದ್ದಾಗಿ ರೈತರ ಹೊಲಗಳಿಗೆ ಭೇಟಿ ನೀಡಿ ಒಣಗಿರುವ ಬೆಳೆಗಳನ್ನು ಹಾಗೂ ರೈತರ ನೈಜ ಪರಿಸ್ಥಿತಿಯನ್ನು ಪರಿಶೀಲಿಸಬೇಕು ಎಂದು ಹೇಳಿದರು. ಅಲ್ಲದೆ, ಹಿರೇಹಳ್ಳಕ್ಕೆ ಕುಡಿಯುವ ನೀರು ಹರಿಸುವ ಮೂಲಕ ಜನ?ಜಾನುವಾರುಗಳ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಬೇಕು ಎಂದು ಒತ್ತಾಯಿಸಿದರು. ರೈತರ ಸಮಸ್ಯೆಗಳಿಗೆ ಸ್ಪಂದಿಸುವಲ್ಲಿ ಹಾಗೂ ಸರ್ಕಾರದ ಮೇಲೆ ಒತ್ತಡ ತಂದು ಅಗತ್ಯ ಅನುದಾನ ತರಿಸುವಲ್ಲಿ ಸಚಿವ ಬೋಸರಾಜು ಮತ್ತು ಶಾಸಕ ಹಂಪಯ್ಯ ನಾಯಕ್ ಅವರು ವಿಫಲರಾಗಿದ್ದಾರೆ ಎಂದು ರಾಜಾ ವೆಂಕಟಪ್ಪ ನಾಯಕ ಅವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಈ ಹಿಂದೆ ಹೆಚ್.ಡಿ. ಕುಮಾರಸ್ವಾಮಿ ಅವರ ಸರ್ಕಾರದ ಅವಧಿಯಲ್ಲಿ ರೈತರ ಸಾಲಮನ್ನಾ ಸೇರಿದಂತೆ ರೈತಪರ ಕ್ರಮಗಳನ್ನು ಕೈಗೊಳ್ಳಲಾಗಿತ್ತು ಎಂದು ಸ್ಮರಿಸಿದ ಅವರು, ಪ್ರಸ್ತುತ ಸರ್ಕಾರವೂ ರೈತರ ಸಂಕಷ್ಟಕ್ಕೆ ತಕ್ಷಣ ಸ್ಪಂದಿಸಬೇಕು ಎಂದು ಒತ್ತಾಯಿಸಿದರು. ರೈತರ ನ್ಯಾಯಯುತ ಬೇಡಿಕೆಗಳ ಈಡೇ-ರಿಕೆಗಾಗಿ ನಡೆಯುತ್ತಿರುವ ಅನಿರ್ದಿಷ್ಟಾವಧಿ ಹೋರಾಟಕ್ಕೆ ಸಂಪೂರ್ಣ ಬೆಂಬಲವಿದ್ದು, ರೈತರಿಗೆ ನ್ಯಾಯ ದೊರೆಯುವವರೆಗೂ ಹೋರಾಟದೊಂದಿಗೆ ಇರುವುದಾಗಿ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಭರವಸೆ ನೀಡಿದರು.

ರೈತಪರ ಸಂಘಟನೆಗಳ ಮುಖಂಡರು, ಜೋಳ ಬೆಳೆಗಾರರು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಸಾಹಿತ್ಯ ಸಿಂಚನ

ಭಾವನೆಗೆ ಮೀರಿದ ಬಂಧನ

ಬಂಧಗಳು ರಕ್ತದಿಂದಲೇ ಹುಟ್ಟಬೇಕೆಂದಿಲ್ಲ,
ಹೃದಯಗಳು ಸೇರಿದಾಗ ನಂಟು ಹುಟ್ಟುತ್ತದೆ.
ಮಾತುಗಳಿಗಿಂತ ಮೌನವೇ ಹೆಚ್ಚು ಹೇಳಿದಾಗ,
ಅಲ್ಲಿ ಪ್ರೀತಿಯ ಅರ್ಥ ಅರಳುತ್ತದೆ.

ಸುಖದಲ್ಲಿ ಜೊತೆ ನಗುವವರು ಹಲವರಿರಬಹುದು,
ದುಃಖದಲ್ಲಿ ಕೈ ಹಿಡಿಯುವವನೇ ನಿಜವಾದವನು.
ದೂರವಿದ್ದರೂ ಮನಸು ಹತ್ತಿರವಾದಾಗ,
ಕಾಲವೂ ಆ ಬಂಧನವನ್ನು ಮುರಿಯಲಾರದು.

ಸ್ವಾರ್ಥವಿಲ್ಲದ ಪ್ರೀತಿಯೊಂದು ಸಿಕ್ಕಾಗ,
ಜೀವನವೇ ಹೊಸ ಅರ್ಥ ಪಡೆಯುತ್ತದೆ.
ಕಣ್ಣೀರನ್ನು ಒರೆಸುವ ಒಂದು ಕೈ,
ಸಾವಿರ ಮಾತುಗಳಿಗಿಂತ ದೊಡ್ಡದು.


ನಂಬಿಕೆಯ ಮೇಲೆ ಕಟ್ಟಿದ ಸಂಬಂಧ,
ಯಾವ ಬಿರುಗಾಳಿಗೂ ಕುಸಿಯದು.
ಹೃದಯದಿಂದ ಹೃದಯಕ್ಕೆ ಬೆಸೆದ ನಂಟೇ,
ಭಾವನೆಗೆ ಮೀರಿದ ಬಂಧನ.

ಎಸ್. ದುರಗಪ್ಪ, ಕುಷ್ಟಗಿ

ನಿಧನ ವಾರ್ತೆ

ನೈಜ್ಯ ದೆಸೆ ನ್ಯೂಸ್

ತಾಂಡವಪುರ: ನಂಜನಗೂಡು ತಾಲೂಕು ಚಿಕ್ಕಯ್ಯನ ಛತ್ರ ಹೋಬಳಿ ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ತಾಂಡವಪುರ




ಗ್ರಾಮದ ಕಾಂಗ್ರೆಸ್ ಮುಖಂಡ ಗುತ್ತಿಗೆದಾರ ಮಾಲಯ್ಯ ರವರ ತಂದೆ ಹಳೆಹಟ್ಟಿ ದೊಡ್ಡ ಮಾಲೆಗೌಡ ರವರಿಗೆ 102 ವಯಸ್ಸು ಆಗಿ-ತ್ತು ಅನಾರೋಗ್ಯ ನಿಮಿತ್ತ ನಿನ್ನೆ ಸ್ವಾಗ್ರಾಮ ತಾಂಡವಪುರದಲ್ಲಿ ನಿಧನ ಹೊಂದಿದರು ಮಾಲೆಗೌಡರಿಗೆ ಇಬ್ಬರು ಪತ್ನಿಯರು ನಾಲ್ವರು ಪುತ್ರರು ಮೂವರು ಪುತ್ರಿಯರು ಹಾಗೂ ಅಪಾರ ಬಂಧು ಬಳಗವನ್ನು ಆಗಲಿದ್ದು ಇವರ ಅಂತ್ಯಕ್ರಿಯೆಯನ್ನು ಗ್ರಾಮದ ರುದ್ರ ಭೂಮಿಯಲ್ಲಿ ನೆರವೇರಿಸಲಾಯಿತು

ಮಳೆಗಾಗಿ ಪ್ರಾರ್ಥಿಸಿ ಗಣೇಶನಿಗೆ ವಿಶೇಷ ಪೂಜೆ ಭಕ್ತರಿಗೆ ಅನ್ನಪ್ರಸಾದ

ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ನಗರದ ಶ್ರೀ ಗಜಾನನ ಸೇವಾ ಸಮಿತಿ ಬುರಡಿಮಠ ಸಮಿತಿಯ ವತಿಯಿಂದ ಸತತ 18ನೇ ವರ್ಷವೂ ಗಣೇಶನ ಮೂರ್ತಿಯನ್ನು ಪ್ರತಿಷ್ಠಾಪಿಸಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.



ತಾಲೂಕಿನಲ್ಲಿ ಸಮರ್ಪಕ ಮಳೆಯಾಗದೆ ರೈತರು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ, ಉತ್ತಮ ಮಳೆ ಸು-ರಿದು ನಾಡು ಸಮೃದ್ಧಿಯಾಗಲಿ, ರೈತರ ಬದುಕು ಹಸನಾಗಲಿ ಎಂದು ಗಣೇಶನಿಗೆ ವಿಶೇಷ ಪೂಜೆ ಸಲ್ಲಿಸಿ ಪ್ರಾರ್ಥಿಸಲಾಯಿತು. ಈ ಸಂದರ್ಭದಲ್ಲಿ ಸುತ್ತಮುತ್ತಲಿನ ವಾರ್ಡ್‌ಗಳ ಸಕಲ ಭಕ್ತರಿಗಾಗಿ ಹೋಳಿಗೆ, ತುಪ್ಪ, ಕಡಬು, ಅನ್ನ?ಸಾರು ಸೇ-ರಿದಂತೆ ವಿವಿಧ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಪ್ರಸಾದ ಸ್ವೀಕರಿಸಿದರು. ಸಮಿತಿಯ ಪದಾಧಿಕಾರಿಗಳು, ಸದಸ್ಯರು ಹಾಗೂ ಭಕ್ತರು ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

ಮಸ್ಕಿ ಪದ್ಮಶಾಲಿ ಸಮಾಜಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ

ಸಮಾಜದ ಸಂಘಟನೆ ಹಾಗೂ ಅಭಿವೃದ್ಧಿಗೆ ಆದ್ಯತೆ ನೀಡಲು ನಿರ್ಧಾರ

ನೈಜ್ಯ ದೆಸೆ ನ್ಯೂಸ್

ಮಸ್ಕಿ: ತಾಲೂಕಿನ ಪದ್ಮಶಾಲಿ ಸಮಾಜದ ನೂತನ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆಯು ಶ್ರೀ ಮಾರ್ಕಂಡೇಶ್ವರ ದೇವಸ್ಥಾನದಲ್ಲಿ ನಡೆದ ಸಭೆಯಲ್ಲಿ ಸರ್ವಾನುಮತದಿಂದ ನೆರವೇರಿತು.

ಸಮಾಜದ ಹಿರಿಯರು ಹಾಗೂ ಸದಸ್ಯರ ಉಪಸ್ಥಿತಿಯಲ್ಲಿ ನಡೆದ ಸಭೆಯಲ್ಲಿ ಸಮಾಜದ ಮುಂದಿನ ಕಾರ್ಯಚಟುವಟಿ-ಕೆಗಳು ಮತ್ತು ಸಂಘಟನೆಯನ್ನು ಬಲಪಡಿಸುವ ಕುರಿತು ಚರ್ಚೆ ನಡೆಸಲಾಯಿತು. ಬಳಿಕ ನೂತನ ಪದಾಧಿಕಾರಿಗಳನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಗೌರವಾಧ್ಯಕ್ಷರಾಗಿ ಡಾ. ಶಂಕರ ಕರ್ಲಿ, ಅಧ್ಯಕ್ಷರಾಗಿ ಲಕ್ಷ್ಮಣ ಕರ್ಲಿ, ಉಪಾಧ್ಯಕ್ಷರಾಗಿ ಪರಶುರಾಮ ಕೊಡುಗುಂಟಿ, ಕಾರ್ಯದರ್ಶಿಯಾಗಿ ವೆಂಕಟೇಶ ಪಗಡೆಕಲ್ ಹಾಗೂ ಸಹಕಾರ್ಯದರ್ಶಿಯಾಗಿ ಆನಂದ ಶ್ರೀರಾಮ ಅವರು ಆಯ್ಕೆಯಾದರು.

ನೂತನ ಪದಾಧಿಕಾರಿಗಳ ಆಯ್ಕೆಯ ನಂತರ ಸಭೆಯಲ್ಲಿ ಉಪಸ್ಥಿತರಿದ್ದ ಸಮಾಜದ ಸದಸ್ಯರು ನೂತನ ತಂಡಕ್ಕೆ ಅಭಿನಂದನೆ



ಸಲ್ಲಿಸಿದರು. ಸಮಾಜದ ಎಲ್ಲ ಸದಸ್ಯರನ್ನು ಒಗ್ಗೂಡಿಸಿಕೊಂಡು ಸಂಘಟನೆಯನ್ನು ಮತ್ತಷ್ಟು ಬಲಪಡಿಸುವುದು, ಸಮಾಜದ ಹಿತಾಸಕ್ತಿಗಾಗಿ ಪರಿಣಾಮಕಾರಿ ಕಾರ್ಯಕ್ರಮಗಳನ್ನು ರೂಪಿಸುವುದು ಹಾಗೂ ಸಾಮಾಜಿ-ಕ, ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಸಮಾಜದ ಪಾತ್ರವನ್ನು ಹೆಚ್ಚಿಸುವಂತೆ ನೂತನ ಪದಾಧಿಕಾರಿಗಳಿಗೆ ಶುಭ ಹಾರೈಸಿದರು. ಸಮಾಜದ ಯುವಜನರನ್ನು ಸಂಘಟನೆಯೊಂದಿಗೆ ಸಕ್ರಿಯವಾಗಿ ತೊಡಗಿಸಿಕೊಳ್ಳುವಂತೆ ಪ್ರೋತ್ಸಾಹಿಸುವುದು, ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಉತ್ತೇಜನ ನೀಡುವುದು ಹಾಗೂ ಸಮಾಜದ ಅಗತ್ಯಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಕುರಿತು ಸಭೆಯಲ್ಲಿ ಆಶಯ ವ್ಯಕ್ತವಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಮಾಜದ ಹಿರಿಯರು, ಯಾವುದೇ ಸಂಘಟನೆಯ ಅಭಿವೃದ್ಧಿಗೆ ಪರಸ್ಪರ ಸಹಕಾರ, ಒಗ್ಗಟ್ಟು ಮತ್ತು ಸಮನ್ವಯ ಅತ್ಯಂತ ಮುಖ್ಯವಾಗಿದ್ದು, ಎಲ್ಲರೂ ಒಂದಾಗಿ ಕೆಲಸ ಮಾಡಿದಾಗ ಮಾತ್ರ ಸಮಾಜವನ್ನು ಮತ್ತಷ್ಟು ಪ್ರಗತಿಯತ್ತ ಕೊಂಡೊಯ್ಯಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

ನೂತನ ಪದಾಧಿಕಾ-ರಿಗಳು ಸಮಾಜದ ಹಿರಿಯರ ಸಲಹೆ ಹಾಗೂ ಸದಸ್ಯರ ಸಹಕಾರದೊಂದಿಗೆ ಪದ್ಮಶಾಲಿ ಸಮಾಜದ ಸಂಘಟನೆ ಮತ್ತು ಅಭಿವೃದ್ಧಿಗಾಗಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುವ ಭರವಸೆ ನೀಡಿದರು. ಸಭೆಯ ಅಂತ್ಯದಲ್ಲಿ ನೂತನ ಪದಾಧಿಕಾ-ರಿಗಳಿಗೆ ಪುಷ್ಪಮಾಲೆ ಹಾಕಿ ಅಭಿನಂದನೆ ಸಲ್ಲಿಸಲಾಯಿತು. ಸಮಾಜದ ಸರ್ವ ಸದಸ್ಯರು ನೂತನ ತಂಡಕ್ಕೆ ಶುಭ ಹಾರೈಸಿದರು.

ಗುರುಸುಣಗಿ ದೇವಸ್ಥಾನ ಪ್ರವೇಶಿಸಿದ ದಲಿತರ ಮೇಲೆ ಹಲ್ಲೆ: ಕಿಡಿಗೇಡಿಗಳನ್ನು ಬಂಧಿಸಿ ಗಡೀಪಾರು ಮಾಡಲು ಡಿಎಸ್‌ಎಸ್ ಮನವಿ

ನೈಜ್ಯ ದೆಸೆ ನ್ಯೂಸ್

ರಾಯಚೂರು: ಯಾದಗಿರಿ ಜಿಲ್ಲೆಯ ವಡಗೇರಾ ತಾಲೂಕಿನ ಗುರುಸುಣಗಿ ಗುಡ್ಡದ ದೇವಸ್ಥಾನದಲ್ಲಿ ದರ್ಶನಕ್ಕಾಗಿ ಪ್ರವೇಶಿಸಿದ ದಲಿತರ ಮೇಲೆ ಹಲ್ಲೆ ನಡೆಸಲಾಗಿದೆ ಎಂದು ಆರೋಪಿಸಿ, ಘಟನೆಗೆ ಕಾರಣರಾದವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಂಡು, ಅವರನ್ನು ತಕ್ಷಣ ಬಂಧಿಸಬೇಕು ಹಾಗೂ ಗಡೀಪಾರು ಮಾಡಬೇಕು ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ (ದಾದಾ ಸಾಹೇಬ್ ಎನ್. ಮೂರ್ತಿ ಸ್ಥಾಪಿತ) ರಾಯಚೂರು ಜಿಲ್ಲಾ ಸಮಿತಿ ಆಗ್ರಹಿಸಿದೆ.

ಈ ಕುರಿತು ರಾಯಚೂರು ತಹಶೀಲ್ದಾರ್ ಅವರ ಮೂಲಕ ರಾಜ್ಯದ ಗೃಹ ಸಚಿವರಾದ ಪ್ರಿಯಾಂಕ ಖರ್ಗೆ ಅವ-ರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಘಟನೆ ಕುರಿತು ಡಿಎಸ್‌ಎಸ್ ಆರೋಪ ಗುರುಸುಣಗಿ ಗುಡ್ಡದ ದೇವಸ್ಥಾನದಲ್ಲಿ ದಲಿತರು ಪ್ರವೇಶಿಸುವುದನ್ನು ಕಾಯುತ್ತಾ ಕೆಲವರು ಪೂರ್ವಸಿದ್ಧತೆಯಿಂದ ಇದ್ದರು. ದಲಿತರು ದೇವಸ್ಥಾನದ ಒಳಗೆ ಪ್ರವೇಶಿಸಿದ ಸಂದರ್ಭದಲ್ಲಿ ಅವರನ್ನು ಹೊರಗೆ ಎಳೆದುಕೊಂಡು ಬಂದು ಬಡಿಗೆ ಹಾಗೂ ಕೈ-ಕಾಲುಗಳಿಂದ ತೀವ್ರವಾಗಿ ಹಲ್ಲೆ ನಡೆಸಿದ್ದಾರೆ ಎಂದು ಸಮಿತಿ ಆರೋಪಿಸಿದೆ. ಈ ಕೃತ್ಯವನ್ನು ಸಮಿತಿ ತೀವ್ರವಾಗಿ ಖಂಡಿಸಿದೆ.

ಡಿಎಸ್‌ಎಸ್ ಪ್ರಮುಖ ಬೇಡಿಕೆಗಳು ಹಲ್ಲೆ ನಡೆಸಿದ ಎಲ್ಲರ ವಿರುದ್ಧ ತಕ್ಷಣ ಕ್ರಿಮಿನಲ್ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೇಲಿನ ದೌರ್ಜನ್ಯ ತಡೆ ಕಾಯ್ದೆ (ಅಟ್ರಾಸಿಟಿ ಕಾಯ್ದೆ) ಅಡಿ ಪ್ರಕರಣ ದಾಖಲಿಸಬೇಕು.

* ಆರೋಪಿಗಳನ್ನು ಕೂಡಲೇ ಬಂಧಿಸಿ, ಕಾನೂನುಬದ್ಧವಾಗಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು.

* ಗ್ರಾಮಗಳಲ್ಲಿ ದಲಿತರ ಮೇಲೆ ಇಂತಹ ದೌರ್ಜನ್ಯಗಳು ಮರುಕಳಿಸದಂತೆ ಕಟ್ಟುನಿಟ್ಟಿನ ಮುನ್ನೆಚ್ಚರಿಕಾ ಹಾಗೂ ಕಾನೂನು ಕ್ರಮ ಕೈಗೊಳ್ಳಬೇಕು.

* ಆಗಸ್ಟ್ ತಿಂಗಳಲ್ಲಿ ರಾಯಚೂರು ಜಿಲ್ಲೆಯ ಹದ್ದಿನಾಳ ಗ್ರಾಮದ ಭೂಮಾನಂದ ಕೊಲೆ, ಹೊಕ್ರಾಣಿ ಗ್ರಾಮದ ಅಶ್ವಿನ್ ಅತ್ಯಾಚಾರ?ಕೊಲೆ ಹಾಗೂ ಲಿಂಗಸುಗೂರು ತಾಲೂಕಿನ ಕರಡಕಲ್ ಗ್ರಾಮದ ರಾಣಮ್ಮ ಕೊಲೆ ಪ್ರಕರಣಗಳಲ್ಲಿಯೂ ಸರ್ಕಾರ ಮತ್ತು ಗೃಹ ಸಚಿವರು ಸೂಕ್ತ



ತನಿಖೆ ನಡೆಸಿ, ಸಂತ್ರಸ್ತ ಕುಟುಂಬಗಳಿಗೆ ನ್ಯಾಯ ಹಾಗೂ ರಕ್ಷಣೆ ಒದಗಿಸಬೇಕು.

* ದಲಿತರ ಮೇಲಿನ ದೌರ್ಜನ್ಯಗಳಿಗೆ ಕಡಿವಾಣ ಹಾಕಲು ಕಠಿಣ ಕಾನೂನು ಕ್ರಮ ಜರುಗಿಸಬೇಕು. ಇಂತಹ ಘಟನೆಗಳಿಗೆ ಕಡಿವಾಣ ಹಾಕದಿದ್ದರೆ ಮುಂದೆಯೂ ದೌರ್ಜನ್ಯಗಳು ಮರುಕಳಿಸುವ ಸಾಧ್ಯತೆ ಇದೆ ಎಂದು ಸಮಿತಿ ಎಚ್ಚರಿಸಿದೆ.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಡಿಎಸ್‌ಎಸ್ ಜಿಲ್ಲಾ ಉಪಾಧ್ಯಕ್ಷ ಬಸವರಾಜ ನಾಡಂಗಿ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಯೇಸು ಬಿಜನಗೇರಾ, ತಾಲೂಕು ಅಧ್ಯಕ್ಷ ಬಶೀರ್ ಅಹಮ್ಮದ್, ದಲಿತ ಮುಖಂಡರಾದ ಅಂಜಿನಯ್ಯ ಉಟೂರು, ಮಂಜು ಅಬ್ರಹಾಂ, ಧರ್ಮಲಿಂಗ ಕುರ್ವಕುರ್ದಾ, ಕೆ.ಎಚ್. ರಾಜಪ್ಪ ತಳವಾರ, ಮಲ್ಲೇಶ ಸಿಂಗ್ರಿ ಸುಲ್ತಾನಪೂರ, ತಿಮ್ಮಪ್ಪ ವಡವಾಟಿ ಸೇ-ರಿದಂತೆ ಹಲವರು ಉಪಸ್ಥಿತರಿದ್ದರು.

ರಾಯಚೂರಿನಲ್ಲಿ ಬೀದಿ ನಾಯಿಗಳ ಹಾವಳಿ: 3 ವರ್ಷದ ಮಗುವಿನ ಮೇಲೆ ಭೀಕರ ದಾಳಿ

ನೈಜ್ಯ ದೆಸೆ ನ್ಯೂಸ್

ರಾಯಚೂರು: ನಗರದ ವಾರ್ಡ್ ನಂ. 28 ಮತ್ತು 29ರ ಎಲ್‌ಬಿಎಸ್ ನಗರ ಹಾಗೂ ಪೊತಗಲ್ ರಸ್ತೆ ಸುತ್ತಮುತ್ತ ಬೀದಿ ನಾಯಿಗಳ ಹಾವಳಿ ತೀವ್ರಗೊಂಡಿದ್ದು, ಸಾರ್ವಜನಿಕರಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ. ಕಳೆದ ಎರಡು ದಿನಗಳಲ್ಲಿ ನಾಲ್ವರು ಮಕ್ಕಳು ಸೇರಿದಂತೆ ಒಟ್ಟು ಆರು ಮಂದಿಯ ಮೇಲೆ ಬೀದಿ ನಾಯಿಗಳು ದಾಳಿ ನಡೆಸಿರುವುದು ಸಾರ್ವಜನಿಕರ ಆತಂಕಕ್ಕೆ ಕಾರಣವಾಗಿದೆ.

ಸೆಪ್ಟೆಂಬರ್ 13ರಂದು ಸಂಜೆ ಸುಮಾರು 4.30ರ ವೇಳೆಗೆ ಪೊತಗಲ್ ರಸ್ತೆಯಲ್ಲಿರುವ ಮನೆಯೊಂದರ ಮುಂದೆ ಆಟವಾಡುತ್ತಿದ್ದ ಮೂರು ವರ್ಷದ ಮಗುವಿನ ಮೇಲೆ ಬೀದಿ ನಾಯಿಗಳ ಗುಂಪು ದಾಳಿ ನಡೆಸಿದೆ. ದಾಳಿಯಲ್ಲಿ ಮಗುವಿನ ಬಲಗೈಗೆ ಗಂಭೀರ ಗಾಯವಾಗಿದ್ದು, ಕುಟುಂಬಸ್ಥರು ಆತಂಕಕ್ಕೊಳಗಾಗಿದ್ದಾರೆ.

ನಗರದ ವಿವಿಧ ಪ್ರದೇಶಗಳಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಶಾಲೆಗೆ ತೆರಳುವ ಮಕ್ಕಳು, ಮಹಿಳೆಯರು ಹಾಗೂ ವೃದ್ಧರು ರಸ್ತೆಗಳಲ್ಲಿ ಸಂಚರಿಸಲು ಭಯಪಡುವಂತಾಗಿದೆ. ರಾತ್ರಿ ವೇಳೆಯಲ್ಲಿ ಬೈಕ್ ಸವಾರರನ್ನು ನಾಯಿಗಳು



ಹಿಂಬಾಲಿಸುತ್ತಿರುವುದರಿಂದ ಅಪಘಾತ ಸಂಭವಿಸುವ ಆತಂಕವೂ ಹೆಚ್ಚಾಗಿದೆ.

ಇದರ ಜೊತೆಗೆ, ಕೆಲವು ಹೋಟೆಲ್‌ಗಳು ಹಾಗೂ ಮಾಂಸದ ಅಂಗಡಿಗಳ ತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡದಿರುವುದರಿಂದ ಬೀದಿ ನಾಯಿಗಳ ಸಂಖ್ಯೆ ಮತ್ತು ಹಾವಳಿ ಹೆಚ್ಚಾಗುತ್ತಿದೆ ಎಂದು ಸ್ಥಳೀಯ ನಿವಾಸಿಗಳು ಆರೋಪಿಸಿದ್ದಾರೆ.

ಈ ಕುರಿತು ಸಾರ್ವಜನಿಕರ ಪರವಾಗಿ ಮೊಹಮ್ಮದ್ ಗೌಸ್ ಮುಲ್ಲಾ ಮಾತನಾಡಿ, "ರಾಯಚೂರು ನಗರದಲ್ಲಿ ಬೀದಿ ನಾಯಿಗಳ ದಾಳಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದರೂ ಜಿಲ್ಲಾಡಳಿತ ಹಾಗೂ ಮಹಾನಗರ ಪಾಲಿಕೆ ಸೂಕ್ತ ಕ್ರಮ ಕೈಗೊಳ್ಳದಿರುವುದು ಸಾರ್ವಜನಿಕರ ಆತಂಕಕ್ಕೆ ಕಾರಣವಾಗಿದೆ. ವಿಶೇಷವಾಗಿ ಚಿಕ್ಕ



ಮಕ್ಕಳ ಜೀವಕ್ಕೆ ಅಪಾಯ ಎದುರಾಗಿರುವ ಸಂದರ್ಭದಲ್ಲಿ ಮತ್ತೊಂದು ದೊಡ್ಡ ಅನಾಹುತ ಸಂಭವಿಸುವವರೆಗೆ ಅಧಿಕಾರಿಗಳು ಕಾಯಬಾರದು. ತಕ್ಷಣವೇ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು" ಎಂದು ಒತ್ತಾಯಿಸಿದರು.

ಆಕ್ರಮಣಕಾರಿ ಬೀದಿ ನಾಯಿಗಳನ್ನು ನಿಯಂತ್ರಿಸುವುದು, ಅಗತ್ಯವಿರುವ ಪ್ರದೇಶಗಳಲ್ಲಿ ಎಬಿಸಿ (ಂಟಿಟಿಚಿಟ ಃಡಿಣh ಅoಟಿಣಡಿoಟ) ಮೂಲಕ ಬಂಧ್ಯೀಕರಣ ಹಾಗೂ ಎಆರ್‌ವಿ (ಂಟಿಣಟ-ಖಚಿbಟಜ ಗಿಚಿಛಿಛಿiಟಿಚಿಣioಟಿ) ಮೂಲಕ ರೇಬಿಸ್ ಲಸಿಕೆ ನೀಡುವ ಕಾರ್ಯವನ್ನು ತ್ವರಿತವಾಗಿ ಕೈಗೊಳ್ಳಬೇಕು. ಜೊತೆಗೆ ನಗರದಲ್ಲಿ ಕಸ ವಿಲೇವಾರಿ ವ್ಯವಸ್ಥೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಿ, ಹೋಟೆಲ್ ಮತ್ತು ಮಾಂಸದ ಅಂಗಡಿಗಳ ತ್ಯಾಜ್ಯವನ್ನು ಸಾರ್ವಜನಿಕ ಸ್ಥಳಗಳಲ್ಲಿ ಎಸೆಯದಂತೆ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

"ಇನ್ನೂ ಎರಡು ದಿನಗಳೊಳಗೆ ರಾಯಚೂರು ಮಹಾನಗರ ಪಾಲಿಕೆ ಪರಿಣಾಮಕಾರಿ ಕ್ರಮ ಕೈಗೊಳ್ಳದಿದ್ದರೆ, ವಾರ್ಡ್ ನಿವಾಸಿಗಳೊಂದಿಗೆ ಮಹಾನಗರ ಪಾಲಿಕೆ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು. ಮುಂದಿನ ದಿನಗಳಲ್ಲಿ ಬೀದಿ ನಾಯಿಗಳ ದಾಳಿಯಿಂದ ಯಾವುದೇ ಅನಾಹುತ ಸಂಭವಿಸಿದರೆ, ಅದಕ್ಕೆ ಸಂಬಂಧಿಸಿದ ಅಧಿಕಾ-ರಿಗಳೇ ಹೊಣೆಗಾರರಾಗಿರುತ್ತಾರೆ" ಎಂದು ಸಾರ್ವಜನಿಕರು ಎಚ್ಚರಿಕೆ ನೀಡಿದ್ದಾರೆ.ಬೇಕಾದರೆ ಇದಕ್ಕೆ ಇನ್ನಷ್ಟು ಆಕರ್ಷಕ ಪತ್ರಿಕಾ ಶೀರ್ಷಿಕೆಗಳು, ಉಪಶೀರ್ಷಿಕೆ ಹಾಗೂ ಫೇಸ್‌ಬುಕ್/ವಾಟ್ಸಾಪ್ ಪೋಸ್ಟ್ ಆವೃತ್ತಿ ಕೂಡ ಸಿದ್ಧಪಡಿಸಬಹುದು.

ಸಮಾಜ ಸೇವಕಿ ಅನು ಅಕ್ಕ ಅವರಿಂದ ಕಾರುಣ್ಯ ಆಶ್ರಮದಲ್ಲಿ ಮಹಾಪ್ರಸಾದ ಸೇವೆ

ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಸರ್ಕಾರಿ ಶಾಲೆಗಳನ್ನು ಉಳಿಸುವ ನಿಟ್ಟಿನಲ್ಲಿ ಹಲವಾರು ಹೋರಾಟ ಹಾಗೂ ಸಮಾಜ ಸೇವೆ ಮಾಡುವ ಮೂಲಕ ನಾಡಿಗೆ ಚಿರಪ-ರಿಚಿತರಾಗಿರುವ ಸಿಂಧನೂರು ತಾಲೂಕಿನ ಚಿಕ್ಕಬೇರ್ಗಿ ಗ್ರಾಮದ ಅನು ಅಕ್ಕ ಅವರ ಸಹೋದ-ರಿಯಾದ ಅಕ್ಷತಾ ಶ್ರೀ ಕಾಂತ್ ಈ ಆದ-ರ್ಶ ದಂಪತಿಗಳ ಪ್ರೀತಿಯ ಮಗನಾದ ಮಣಿಕಂಠ ಇವರ ಮೂರನೇ ವರ್ಷದ ಜನ್ಮದಿನ ಸಮಾರಂಭ

ಕಾರ್ಯಕ್ರಮವನ್ನು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆ ಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಅವರ ಅನು ಅಕ್ಕ ಅವರ ಕುಟುಂಬದಿಂದ ವಿಶೇಷ ಮಹಾಪ್ರಸಾದ ಸೇವೆ ಹಣ್ಣು ಹಂಪಲುಗಳನ್ನು ವಿತರಿಸುವ ಮೂಲಕ ಅರ್ಥಪೂರ್ಣವಾಗಿ ಜನ್ಮ ಸಾರ್ಥಕ ದಿನ ನೆರವೇರಿತು. ಈ ಕಾರ್ಯಕ್ರಮದಲ್ಲಿ ವಿಡಿಯೋ ಮೂಲಕ ಆಶ್ರಮದ ಎಲ್ಲಾ ಹಿರಿಯರ



ಆಶೀರ್ವಾದಗಳನ್ನು ಸ್ವೀಕರಿಸಿದ ಅನು ಅಕ್ಕ ನಮ್ಮ ಸಿಂಧನೂರಿನ ನಮ್ಮ ಕಾರುಣ್ಯ ಆಶ್ರಮಕ್ಕೆ ನಾನು ನಿರಂತರವಾಗಿ ಬೆನ್ನೆಲುಬಾಗಿರುತ್ತೇನೆ ಎಂದು ಮಾತನಾಡಿ ಆಶ್ರಯದಾತರುಗಳಿಗೆ ಆತ್ಮಸ್ಥೈರ್ಯ ತುಂಬಿದರು. ಈ ಕಾರ್ಯಕ್ರಮದಲ್ಲಿ ಅನು ಅಕ್ಕ ಅವರ ಸಹೋದರಿಯಾದ ಅಕ್ಷತಾ ಶ್ರೀಕಾಂತ್ ಈ ದಂಪತಿಗಳನ್ನು ಆಶ್ರಮದ ವತಿಯಿಂದ ಸನ್ಮಾನಿಸಿ ಗೌರವಿಸಿ ಆಶೀರ್ವದಿಸಲಾಯಿತು. ನಂತರ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಮಾತನಾಡಿ ನಮ್ಮ ಸಿಂಧನೂ-ರಿನ ಮನೆಮಗಳಾದ ಸಹೋದರಿ ಅನು ಅವರು ನಾಡಿನಲ್ಲಿ ಅಕ್ಕನ ಸ್ಥಾನವನ್ನು ತುಂಬಿ ಪ್ರತಿಯೊಬ್ಬ-ರಿಗೂ ಕೂಡ ಸ್ವಂತ ಸಹೋದರಿಯರ ಹಾಗೆ ಸರ್ಕಾರಿ ಶಾಲೆಗಳನ್ನು ಉಳಿಸುವ ನಿಟ್ಟಿನಲ್ಲಿ ಸ್ವತಃ ಶಾಲೆಗಳಿಗೆ ಹೊಸ ರೂಪ ಕೊಡುವ ಈ ಹೋರಾಟಗಾರ್ತಿಯಾದ ಪ್ರತಿಭೆ ನಮ್ಮ ಸಿಂಧನೂರಿನ ಘನತೆ ಗೌರವವನ್ನು ಹೆಚ್ಚಿಸಿದೆ.

ನಮ್ಮ ಸಿಂಧನೂರಿನ ಸೇವಾ ಮನೋಭಾವನೆಯನ್ನು ನಾಡಿಗೆ ತೋ-ರಿಸಿಕೊಟ್ಟ ಕೀರ್ತಿ ಅನು ಅಕ್ಕನಿಗೆ ಸಲ್ಲುತ್ತದೆ. ನಾನು ಸುಮಾರು ಕಾರ್ಯಕ್ರಮಗಳಲ್ಲಿ ಅನು ಅವರನ್ನು ಭೇಟಿಯಾದಾಗ ಸಮಾಜದಲ್ಲಿನ ಅನೇಕ ಹಲವಾರು ಟೀಕೆ ಟಿಪ್ಪಣಿ ಅವಮಾನ ಅಪಪ್ರಚಾರ ಗಳಿಗೆ ಕಿವಿಗೊಡದೆ ಸೇವೆ ಮಾಡಿ ಆ ಭಗವಂತ ನಿಮ್ಮೊಂದಿಗಿದ್ದಾನೆ ಎಂದು ಹೇಳಿದ ಹಲವಾರು ಮಾತುಗಳು ಇಂದು ನಮ್ಮ ಸಂಸ್ಥೆಯ ಸೇವೆಗಳಿಗೆ ಸ್ಫೂರ್ತಿಯಾಗಿದೆ ಸರ್ಕಾರಿ ಶಾಲೆಗಳನ್ನು ಉಳಿಸುವ ನಿಟ್ಟಿನಲ್ಲಿ ನಮ್ಮ ಅನು ಅಕ್ಕ ಅವರ ಸೇವೆ ಅಪಾರವಾಗಿದೆ. ಇಂದು ಅವರ ಸಹೋದರಿಯ ಮಗನಾದ ಮಣಿಕಂಠ ಅನು ಅವರ ಆದರ್ಶ ವ್ಯಕ್ತಿತ್ವವನ್ನು ಮಡಿ ಮೈಗೂಡಿಸಿಕೊಂಡು ಭಾರತ ದೇಶದ ಸಂಸ್ಕಾರ ಸಂಸ್ಕೃತಿಯನ್ನು ಉಳಿಸುವಂತಹ ಒಬ್ಬ ಮಹಾನ್ ವ್ಯಕ್ತಿಯಾಗಲಿ ಎಂದು ಕಾರುಣ್ಯ ಕುಟುಂಬದ ಎಲ್ಲಾ ಕೂಸುಗಳು ಆಶೀರ್ವದಿಸಿದ್ದಾರೆ.

ನಮ್ಮ ಕಾರುಣ್ಯ ಆಶ್ರಮಕ್ಕೆ ಮಗಳಾಗಿ ಮೊಮ್ಮಗಳಾಗಿ ಅನು ಅಕ್ಕ ಅವರ ಸೇವೆ ನಿರಂತರವಾಗಿರಲಿ ಎನ್ನುವುದು ಕಾರುಣ್ಯ ಕುಟುಂಬದ ವಿಶೇಷ ಪ್ರಾರ್ಥನೆಯಾಗಿದೆ ಎಂದು ಭಾವನಾತ್ಮಕವಾಗಿ ಮಾತನಾಡಿ ಅನು ಅಕ್ಕ ಅವರಿಗೆ ಶುಭ ಹಾರೈಸಿದರು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ವೆಂಕೋಬ ಚಿಕ್ಕಬೇರ್ಗಿ. ರಂಗನಾಥ ರಾಯತೂರು. ಅಕ್ಷತಾ. ಶ್ರೀಕಾಂತ್. ಮಣಿಕಂಠ. ಹಾಗೂ ಆಶ್ರಮದ ಸದಸ್ಯರಾದ ಸುಜಾತ ಹಿರೇಮಠ. ಸಿಬ್ಬಂದಿಗಳಾದ ಸಿದ್ದಯ್ಯ ಸ್ವಾಮಿ. ಮರಿಯಪ್ಪ. ಜ್ಯೋತಿ.ಮಹಾಂತೇಶ ದೋಟಿಹಾಳ. ಶರಣು ಸ್ವಾಮಿ. ಬಸವ ಸ್ವಾಮಿ. ಅನೇಕರು ಉಪಸ್ಥಿತರಿದ್ದರು.

ನೇಮಕಾತಿ ಪ್ರಕಟಣೆ

ಅಕಖಿಖ ನೇಮಕಾತಿ 2026– 110 ಒಖಿಖ ಮತ್ತು ಇಂಜಿನಿಯರಿಂಗ್ ಆಫೀಸರ್ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಸೆಪ್ಟೆಂಬರ್ 15, 2026


CPRI ನೇಮಕಾತಿ 2026: 110 MTS ಮತ್ತು ಇಂಜಿನಿಯ–ರಿಂಗ್ ಆಫೀಸರ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಸೆಪ್ಟೆಂಬರ್ 2026ರ ಅಧಿಕೃತ ಅಧಿಸೂಚನೆಯ ಮೂಲಕ MTS ಮತ್ತು ಇಂಜಿನಿಯರಿಂಗ್ ಆಫೀಸರ್ ಹುದ್ದೆಗಳನ್ನು ಭರ್ತಿ ಮಾಡಲು ಸೆಂಟ್ರಲ್ ಪವರ್ ರಿಸರ್ಚ್ ಇನ್‌ಸ್ಟಿಟ್ಯೂಟ್ (CPRI) ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಬೆಂಗಳೂರಿನಲ್ಲಿ ಕರ್ನಾಟಕ ಸರ್ಕಾರದ ಉದ್ಯೋಗವನ್ನು ಬಯಸುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 30–ಸೆಪ್ಟೆಂಬರ್–2026 ರೊಳಗೆ ಅಥವಾ ಅಂದು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: cpri.res.in

ಪ್ರವಾಸಿ ಮಂದಿರದ ಆವರಣವನ್ನು ಸ್ವಚ್ಛಗೊಳಿಸಿ ಅಲಂಕಾರಿಕ ಮರಗಿಡಗಳನ್ನು ಬೆಳೆಸುವಂತೆ ಕರವೇ ಒತ್ತಾಯ

ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ಪಟ್ಟಣದ ಪ್ರವಾಸಿ ಮಂದಿರವು ಸಾರ್ವಜನಿಕರು, ಜನಪ್ರತಿನಿಧಿಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಆಗಾಗ್ಗೆ ಭೇಟಿ ನೀಡುವ ಪ್ರಮುಖ ಸ್ಥಳವಾಗಿದೆ . ಪ್ರವಾಸಿ ಮಂದಿರದ ಆವರಣವನ್ನು ಸ್ವಚ್ಛಗೊಳಿಸಿ ಅಲಂಕಾರಿಕ ಮರಗಿಡಗಳನ್ನು ಬೆಳೆಸುವಂತೆ ಕರವೇ ಪ್ರವೀಣ್ ಶೆಟ್ಟಿ ಬಣದ ತಾಲೂಕ ಅಧ್ಯಕ್ಷ ಆಂಜನೇಯ ಭಂಡಾರಿ ಸಹಾಯಕ ಆಯುಕ್ತರಿಗೆ ಮನವಿಯನ್ನು ಸಲ್ಲಿಸಿದರು.

ಪ್ರವಾಸಿ ಮಂದಿರದ ಎರಡನೇ ಪ್ರವೇಶ ದ್ವಾರವು ಹಲವು ದಿನಗಳಿಂದ ತೆರೆಯದೇ ಇರುವುದರಿಂದ ಸಾರ್ವಜನಿಕರು ಹಾಗೂ ವಾಹನಗಳ ಸಂಚಾರಕ್ಕೆ ಅನಾನುಕೂಲ ಉಂಟಾಗುತ್ತಿದೆ. ಅಲ್ಲದೇ ಪ್ರವೇಶ ದ್ವಾರ ಕುಡುಕರ ತಾಣವಾಗಿ ಮಾರ್ಪಟ್ಟಿದೆ. ಸಾರ್ವಜನಿಕರ ಅನುಕೂಲಕ್ಕಾಗಿ ಎರಡನೇ ಪ್ರವೇಶ ದ್ವಾರವನ್ನು ಕೂಡಲೇ ತೆರೆಯುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಬೇಕು. ಪ್ರವಾಸಿ ಮಂದಿರದ ಆವರಣದಲ್ಲಿ ಸ್ವಚ್ಛತೆ ಕೊರತೆ ಕಂಡುಬರುತ್ತಿದ್ದು, ಗಿಡಗಂಟಿಗಳು ಬೆಳೆದು ಅದಗೆಟ್ಟಿರುವ ಪರಿಸ್ಥಿತಿ ಇದೆ. ಇದ–ರಿಂದ ಪ್ರವಾಸಿ ಮಂದಿರದ ಸೌಂದರ್ಯ ಹಾಗೂ ಸ್ವಚ್ಛತೆಗೆ ಧಕ್ಕೆಯಾಗುತ್ತಿದೆ. ಆದ್ದರಿಂದ



ಆವರಣವನ್ನು ಸಂಪೂರ್ಣವಾಗಿ ಸ್ವಚ್ಛಗೊಳಿಸಿ. ಅನಗತ್ಯ ಗಿಡಗಂಟೆಗಳನ್ನು ತೆರವುಗೊಳಿಸಿ. ನಿಯಮಿತವಾಗಿ ಸ್ವಚ್ಛತಾ ಕಾರ್ಯ ಕೈಗೊಳ್ಳಬೇಕು. ಪ್ರವಾಸಿ ಮಂದಿರದ ಆವರಣದಲ್ಲಿ ಪರಿಸರಕ್ಕೆ ಪೂರಕವಾಗಿರುವ ಆಲಂಕಾ–ರಿಕ ಮರಗಿಡಗಳು, ಹೂವಿನ ಗಿಡಗಳು ಮತ್ತು ವಿವಿಧ ಬಗೆಯ ಸಸ್ಯಗಳನ್ನು ನೆಟ್ಟು ಬೆಳೆಸುವ ಮೂಲಕ ಹಸಿರು ವಾತಾವರಣ ನಿರ್ಮಿಸಬೇಕು.

ನೆಡಲಾಗುವ ಗಿಡಗಳಿಗೆ ಸಮರ್ಪಕವಾಗಿ ನೀರುಣಿಸುವ ಹಾಗೂ ಅವುಗಳ ಸಂರಕ್ಷಣೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು. ಈ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ, ಪ್ರವಾಸಿ ಮಂದಿರದ ಎರಡನೇ ಪ್ರವೇಶ ದ್ವಾರವನ್ನು ತಕ್ಷಣವೇ ತೆರೆಯುವುದು. ಆವರಣವನ್ನು ಸ್ವಚ್ಛಗೊಳಿಸುವುದು ಹಾಗೂ ಅಲಂಕಾರಿಕ ಮರಗಿಡಗಳನ್ನು ನೆಟ್ಟು ಸಂರಕ್ಷಿಸುವ ಕುರಿತು ಆಗತ್ಯ ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ತಮ್ಮ ಕಾರ್ಯಾಲಯದ ಮುಂದೆ ಹೋರಾಟವನ್ನು ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಒತ್ತಾಯಿಸಿದರು . ಈ ಸಂದರ್ಭದಲ್ಲಿ ಭೀಮೇಶ್ ಎಲ್ ನಾಯಕ್ , ಶಿವು ಪತ್ತಾರ್ , ಸಲೀಮ್ ಖಾನ್ , ಮೌನೇಶ್ ಬುಳ್ಳಪುರ , ಸಿದ್ದು ಚಲುವಾದಿ ಸೇರಿದಂತೆ ಇತರರು ಇದ್ದರು .

18ರಂದು ಸಾಹಸಸಿಂಹ ಡಾ. ವಿಷ್ಣುವರ್ಧನ್ 76ನೇ ಜನ್ಮದಿನಾಚರಣೆ...ಉದ್ಬೂರು ಗೇಟ್ ಸ್ಮಾರಕದಲ್ಲಿ ಅದ್ಧೂರಿ ಕಾರ್ಯಕ್ರಮ...

ನೈಜ್ಯ ದೆಸೆ ನ್ಯೂಸ್

ತಾಂಡವಪುರ: ಸಾಹಸಸಿಂಹ ಕರ್ನಾಟಕ ರತ್ನ ಡಾ. ವಿಷ್ಣುವರ್ಧನ್ ಅವರ 76ನೇ ಜನ್ಮದಿನಾಚರಣೆಯನ್ನು ಸೆಪ್ಟೆಂಬರ್ 18ರಂದು ಬೆಳಗ್ಗೆ 11:30ಕ್ಕೆ ಅದ್ಧೂರಿಯಾಗಿ ಆಚರಿಸಲಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಉದ್ಬೂರ್ ಗೇಟ್ ಸಮೀಪವಿರುವ ಡಾ. ವಿಷ್ಣುವರ್ಧನ್ ಸ್ಮಾರಕದಲ್ಲಿ ಸುಮಾರು 5,000ಕ್ಕೂ ಹೆಚ್ಚು ಅಭಿಮಾನಿಗಳಿಗೆ ಸಾಂಪ್ರದಾಯಿಕ ಹೋಳಿಗೆ ಊಟದ ವ್ಯವಸ್ಥೆ ಮಾಡಲಾಗಿದೆ ಹಾಗೂ ಲಯನ್ಸ್ ಜೀವದಾರ ರಕ್ತ ನಿಧಿ ಕೇಂದ್ರದ ವತಿಯಿಂದ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಸಹ ಆಯೋಜಿಸಲಾಗಿದೆ ಎಂದು ಡಾ. ವಿಷ್ಣು ಸ್ಮಾರಕ ಸೇನಾ ಸಮಿತಿಯ ಅಧ್ಯಕ್ಷ ಬೆಂಕಿ ಮಹದೇವ್ ತಿಳಿಸಿದ್ದಾರೆ ಅವರು ಮೈಸೂರು ಜಿಲ್ಲಾ . ಪತ್ರಕರ್ತರ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ಕನ್ನಡ ಚಿತ್ರರಂಗದ ಮೇರು ನಟ, ಲಕ್ಷಾಂತರ ಅಭಿಮಾನಿಗಳ ಆರಾಧ್ಯ ದೈವವಾಗಿರುವ ಡಾ. ವಿಷ್ಣುವರ್ಧನ್ ಅವರ ಜನ್ಮದಿನವನ್ನು ಪ್ರತಿವರ್ಷದಂತೆ ಈ ಬಾರಿಯೂ ಡಾ. ವಿಷ್ಣು ಸ್ಮಾರಕ ಸೇವಾ ಸಮಿತಿ ವತಿಯಿಂದ ಸೇವಾ ಕಾರ್ಯಗಳ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ ಎಂದರು.ಡಾ. ವಿಷ್ಣುವರ್ಧನ್ ಅವರು ಕೇವಲ ಶ್ರೇಷ್ಠ ನಟರಷ್ಟೇ ಅಲ್ಲ, ಸಮಾಜಮುಖಿ ಚಿಂತನೆ,




ಮಾನವೀಯ ಮೌಲ್ಯಗಳು ಹಾಗೂ ಸರಳ ವ್ಯಕ್ತಿತ್ವದ ಮೂಲಕ ಜನಮನ ಗೆದ್ದ ಮಹಾನ್ ವ್ಯಕ್ತಿತ್ವವಾಗಿದ್ದರು. ಅವರ ಆದರ್ಶಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವ ಉದ್ದೇಶದಿಂದ ಜನ್ಮದಿನಾಚರಣೆಯನ್ನು ವಿಶೇಷವಾಗಿ ಆಯೋಜಿಸಲಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಸಾಹಸಸಿಂಹ ಡಾ. ವಿಷ್ಣುವರ್ಧನ್ ಅವರ ಕಲಾ ಸೇವೆ, ಕನ್ನಡ ಚಿತ್ರರಂಗಕ್ಕೆ ನೀಡಿದ ಅಮೋಘ ಕೊಡುಗೆ ಹಾಗೂ ಸಮಾಜಮುಖಿ ಕಾರ್ಯಗಳನ್ನು ಸ್ಮರಿಸಲಾಗುವುದು. ವಿವಿಧ ಕ್ಷೇತ್ರಗಳ ಗಣ್ಯರು, ಕಲಾವಿದರು, ಸಮಾಜಸೇವಕರು, ಸಂಘ–ಸಂಸ್ಥೆಗಳ ಮುಖಂಡರು ಹಾಗೂ ಅಭಿಮಾನಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದರು.ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಶಾಸಕರುಗಳಾದ ಜಿ.ಟಿ. ದೇವೇಗೌಡ, ಜಿ.ಡಿ. ಹರೀಶ್ ಗೌಡ , ಟಿ ಎಸ್ ಶ್ರೀವತ್ಸ , ಮಾಜಿ ಶಾಸಕ ನಾಗೇಂದ್ರ, ಕಾಂಗ್ರೆಸ್ ಮುಖಂಡರಾದ ಚೇತನ್ ವಿಷಕಂಠ, ಊರಿಗೆ ಉಪಕಾರಿ ವಿಷ್ಣುವರ್ಧನ್ ಅಭಿಮಾನಿಗಳ ಸಂಘದ ಅಧ್ಯಕ್ಷ ಎಂ ಜಿ ಆರ್ ಮಣಿ, ಹಾಗೂ ಖ್ಯಾತ ಚಲನಚಿತ್ರ ನಟ ಸುಂದರ್ ರಾಜ್ ಸೇರಿದಂತೆ ಹಲವಾರು ಗಣ್ಯರು ಆಗಮಿಸಲಿದ್ದು, ಚಲನಚಿತ್ರ ಮತ್ತು ರಂಗಭೂಮಿ ಕ್ಷೇತ್ರದ ಹಲವು ಕಲಾವಿದರು ಸಹ ಉಪಸ್ಥಿತರಿರಲಿದ್ದಾರೆ ಎಂದು ಮಾಹಿತಿ ನೀಡಿದರು. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಂಘಟಕರು, ಡಾ. ವಿಷ್ಣುವರ್ಧನ್ ಅವರ ಜನ್ಮದಿನವನ್ನು ಕೇವಲ ಆಚರಣೆಯಾಗಿ ಮಾತ್ರವಲ್ಲದೆ, ಸಮಾಜ ಸೇವೆಯ ಸಂಕಲ್ಪದೊಂದಿಗೆ ನಡೆಸಲಾಗುತ್ತಿದೆ. ಆದ್ದರಿಂದ ಸಾರ್ವಜನಿಕರು ಹಾಗೂ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು. ಪತ್ರಿಕಾಗೋಷ್ಠಿಯಲ್ಲಿ ಡಾ. ವಿಷ್ಣು ಸ್ಮಾರಕ ಸೇನಾ ಸಮಿತಿಯ ಗೌರವಾಧ್ಯಕ್ಷೆ ಶಾಂತಕುಮಾರಿ, ಎಂ ಡಿ ಪಾರ್ಥಸಾರಥಿ ಅಧ್ಯಕ್ಷ ಬೆಂಕಿ ಮಹದೇವ್, ಉಪಾಧ್ಯಕ್ಷ ಸಂತೋಷ್ ಎಸ್., ಪ್ರಧಾನ ಕಾರ್ಯದರ್ಶಿ ರಾಜು ಎಸ್.ಆರ್., ಸಹ ಕಾರ್ಯದರ್ಶಿ ಮಹದೇವಸ್ವಾಮಿ, ಮಾರ್ಗದರ್ಶಕರಾದ ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್ ಸೇರಿದಂತೆ ಸಮಿತಿಯ ಪದಾಧಿಕಾರಿಗಳು ಸುದ್ದಿಗೋಷ್ಠಯಲ್ಲಿ ಭಾಗಿಯಾಗಿದ್ದರು

ರಾಘವೇಂದ್ರ ಕುಷ್ಟಗಿ ಅವರಿಗೆ ನುಲೇನೂರು ಶಂಕರಪ್ಪ ಹಸಿರು ಪುರಸ್ಕಾರ
ಚಿತ್ರದುರ್ಗದ ನುಲೇನೂರು ಶಂಕರಪ್ಪ ಪ್ರತಿಷ್ಠಾನದಿಂದ ನೀಡುವ ಪ್ರತಿಷ್ಠಿತ ಪ್ರಶಸ್ತಿ

ನೈಜ್ಯ ದೆಸೆ ನ್ಯೂಸ್

ರಾಯಚೂರು: ಚಿತ್ರದುರ್ಗದ ನುಲೇನೂರು ಶಂಕರಪ್ಪ ಪ್ರತಿಷ್ಠಾನದ ವತಿಯಿಂದ ಕೊಡಮಾಡುವ ಪ್ರತಿಷ್ಠಿತ ನುಲೇನೂರು ಶಂಕರಪ್ಪ ಹಸಿರು ಪುರಸ್ಕಾರ ಪ್ರಶಸ್ತಿಗೆ ಈ ಬಾರಿ ಚಿಂತಕ ಹಾಗೂ ಸಾಮಾಜಿಕ ಹೋರಾಟಗಾರ ರಾಘವೇಂದ್ರ ಕುಷ್ಟಗಿ ಅವರನ್ನು ಆಯ್ಕೆ ಮಾಡಲಾಗಿದೆ.

ಪ್ರಶಸ್ತಿಯು 25 ಸಾವಿರ ರೂಪಾಯಿ ನಗದು ಹಾಗೂ ಸ್ಮರಣಿಕೆ ಒಳಗೊಂಡಿದೆ. ಅಕ್ಟೋಬರ್ ಮೊದಲವಾರ ರಾಯಚೂ–ರಿನಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಪ್ರತಿಷ್ಠಾನದ ಸದಸ್ಯ ಚಿಕ್ಕಪ್ಪನಹಳ್ಳಿ ಷಣ್ಮುಖ ಮಾಹಿತಿ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ರಾಘವೇಂದ್ರ ಕುಷ್ಟಗಿ ಅವರು ಕಲ್ಯಾಣ ಕರ್ನಾಟದ ಆರ್ಟಿಕಲ್ 371(ಜೆ) ಗೆ ಹೋರಾಟ ಮಾಡಿ ಯಶ ಕಂಡಿದ್ದಾರೆ. ಅಕ್ರಮ ಗಣಿಗಾರಿಕೆ, ಅನ್ಯಾಯದ ಭೂ ಸ್ವಾಧೀನ, ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣೆಗಾಗಿ ಎಸ್.ಆರ್.ಹಿರೇಮಠ ಅವರ ಜೊತೆಗೂಡಿ ಜನ ಸಂಗ್ರಾಮ ಪರಿಷತ್ ಸ್ಥಾಪನೆ ಮಾಡಿದ್ದರು. ಅಕ್ರಮ ಗಣಿಗಾ–ರಿಕೆ ವಿರುದ್ಧ ರಾಯಚೂರಿನಿಂದ ಬೆಂಗಳೂರು ವರೆಗೆ ಬೃಹತ್ ಜಾಥಾ ಸಂಘಟಿಸಿದ್ದರು.



ಗದಗದ ಕಪ್ಪತಗುಡ್ಡ ರಕ್ಷಣೆಗೆ ಪಶ್ಚಿಮಘಟ್ಟದಿಂದ ಆರಂಭಗೊಂಡ ಜಾಥಾದಲ್ಲಿ ಪಾಲ್ಗೊಂಡಿದ್ದರು. ಚಿಂತಕ ದೇವನೂರು ಮಹಾದೇವ. ರೈತ ಸಂಘದ ಪುಟ್ಟಣ್ಣಯ್ಯ, ಎಸ್ ಆರ್.ಹಿರೇಮಠ ಅವರ ಜೊತೆ ಸೇರಿ ಜನಾಂದೋಲನ ಮಹಾ ಮೈತ್ರಿ ಸ್ಥಾಪನೆ ಮಾಡಿದ್ದರು. 2005 ರಲ್ಲಿ ಹಟ್ಟಿ ಚಿನ್ನದ ಗಣಿ ಕಾರ್ಮಿಕರ ಸಂಘದ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದರು.

ರಾಘವೇಂದ್ರ ಕುಷ್ಟಗಿ ಅವರ ಸಾಮಾಜಿಕ ಹಾಗೂ ಕಾರ್ಮಿಕ ಹೋರಾಟವನ್ನು ಗುರುತಿಸಿ ಪ್ರಶಸ್ತಿಗೆ ಪರಿಗಣಿಸಲಾಗಿದೆ ಎಂದು ಷಣ್ಮುಖ ತಿಳಿಸಿದರು.

ನುಲೇನೂರು ಶಂಕರಪ್ಪ ಅವರು ಚಿತ್ರದುರ್ಗ ನೆಲದ ಗಟ್ಟಿ ಹೋರಾಟಗಾರನಾಗಿದ್ದು ರೈತ ಸಂಘಟನೆಯಲ್ಲಿ ಪ್ರಮುಖವಾಗಿ ಗುರುತಿಸಿಕೊಂಡಿದ್ದರು. ಎಲ್ಲ ಸಾಮಾಜಿಕ ಹೋರಾಟದಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದರು. ಚಿತ್ರದುರ್ಗ ನೆಲಕ್ಕೆ ನೀರುಣಿಸುವ ಭದ್ರಾ ಮೇಲ್ದಂಡೆಯ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಅಧ್ಯಕ್ಷರಾಗಿಯೂ ಕಾರ್ಯನಿರ್ವಹಿಸಿದ್ದರು. ಅವರ ಹೆಸರಿನಲ್ಲಿ ಪ್ರತಿಷ್ಠಾಪನೆ ಸ್ಥಾಪಿಸಿ ಹಸಿರು ಪುರಸ್ಕಾರ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ ಎಂದು ಪ್ರತಿಷ್ಠಾನದ ಮತ್ತೋರ್ವ ಸದಸ್ಯ ಸಂಗೇನಹಳ್ಳಿ ಅಶೋಕ್ ಕುಮಾರ್ ತಿಳಿಸಿದರು.

ಈ ಕುರಿತು ಚಿತ್ರದುರ್ಗದಲ್ಲಿ ನಡೆದ ಸುದ್ದಿಗೋಷ್ಠೀಯಲ್ಲಿ ಪ್ರತಿಷ್ಠಾನದ ಸದಸ್ಯರಾದ ಹಿರಿಯ ಪತ್ರಕರ್ತ ಶ.ಮಂಜುನಾಥ್, ಹಂಪಯ್ಯನಮಾಳಿಗೆ ಧನಂಜಯ, ರುದ್ರಸ್ವಾಮಿ ಇದ್ದರು.

ಚಿನ್ನಕ್ಕೆ ತುಕ್ಕು ಹಿಡಿಯುವ ಕಾಲಘಟ್ಟದಲ್ಲಿ ಇದ್ದೇವೆ: ಮುಹಮ್ಮದ್ ಕುಂಞ

ನೈಜ್ಯ ದೆಸೆ ನ್ಯೂಸ್

ಬಳ್ಳಾರಿ: ಜಮಾತೆ ಇಸ್ಲಾಮಿ ಹಿಂದ್ ಬಳ್ಳಾರಿ ಜಿಲ್ಲಾ ಘಟಕವು ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ನಿನ್ನೆ ಸಂಜೆ ಆಯೋಜಿಸಿದ್ದ ಕ್ರಾಂತಿಯ ಜ್ಯೋತಿ ಪ್ರವಾದಿ ಮುಹಮ್ಮದ್(ಸ) ಎನ್ನುವ ವಿಚಾರಗೋಷ್ಠಿಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ ಒಂದು ಸುಳ್ಳನ್ನು ಹಲವು ಬಾರಿ ಹೇಳಿ ಅದನ್ನೇ ಸತ್ಯವೆಂದು ಸಾಧಿಸುವ ಪ್ರಸ್ತುತ ಸನ್ನಿವೇಶದಲ್ಲಿ ಪ್ರತಿಯೊಬ್ಬರೂ ಅವರವರ ಧರ್ಮಗಳ ನಿಜಾಚರಣೆಯನ್ನು ಅನುಷ್ಠಾನಗೊಳಿಸುವ ಮೂಲಕ ಸತ್ಯ, ನ್ಯಾಯ ಮತ್ತು ಶಾಂತಿ ಮಾರ್ಗದಲ್ಲಿ ನಡೆಯುವುದು ಇಂದಿನ ಅವಶ್ಯಕತೆಯಾಗಿದೆ ಎಂದು ಮಂಗಳೂ–ರಿನ ಶಾಂತಿ ಪ್ರಕಾಶನದ ವ್ಯವಸ್ಥಾಪಕರಾದ ಮಹಮ್ಮದ್ ಕುಂಞ ಅಭಿಪ್ರಾಯ ಪಟ್ಟರು.

ಮಾದಕ ವಸ್ತು ಸೇವನಾ ಮುಕ್ತ ಸಮಾಜ ರಚನೆ, ಬಡ್ಡಿ ವ್ಯವಹಾರವನ್ನು ವಿರೋಧಿಸುವ, ಸ್ತ್ರೀಯರ ಸ್ವತಂತ್ರ ಹಾಗೂ ಪ್ರತಿಯೊಬ್ಬ ಮಾನವರ ಹಕ್ಕುಗಳ ಪ್ರತಿಪಾದನೆ ಹಾಗೂ ಶೋಷಣಾ ಮುಕ್ತ ಸಮಾಜದ ರಚನೆಗೆ ಪ್ರವಾದಿ ಮಹಮ್ಮದರು ಒತ್ತು ನೀಡಿದ್ದಾರೆ. ಕರುಣೆ, ಪ್ರೀತಿ ಬತ್ತಿ ಹೋಗುತ್ತಿರುವ ಸಮಾಜ ನಿರ್ಮಾಣವಾಗುತ್ತಿದೆ, ವಿದ್ಯಾವಂತರು ಹೆಚ್ಚಾದಂತೆ ವೃದ್ಧಾಶ್ರಮ ಹೆಚ್ಚಾಗುತ್ತಿರುವುದು ಅನಾಗರೀಕ ಸಂಸ್ಕೃತಿ ಎಂದು ಅವರು ತಿಳಿಸಿದರು. ಎಲ್ಲಾ ಧರ್ಮಗಳ ದಾರ್ಶನಿಕರ, ಆದ–ರ್ಶ ವ್ಯಕ್ತಿಗಳ ಸಂದೇಶಗಳ ಮೌಲ್ಯಗಳನ್ನು ಸಮಾಜಕ್ಕೆ ತಿಳಿಸುವುದು ಜಮಾತೆ ಇಸ್ಲಾಮೀ



ಹಿಂದ್ ನ ಉದ್ದೇಶವಾಗಿದೆ. ಪರಸ್ಪರರು ಅರಿತು ಬಾಳಬೇಕು ಎಂದು ಕ್ರೈಸ್ತ ಧರ್ಮ ಗುರುಗಳಾದ ಫಾದರ್ ಮ್ಯಾಕ್ಸಿಮ್ ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ರಾಷ್ಟ್ರೀಯ ಬಸವದಳದ ಪ್ರಧಾನ ಕಾರ್ಯದರ್ಶಿ ಕೆ. ವಿ. ರವಿಶಂಕರ್ ಮಾತನಾಡಿ, ಇಂದಿನ ಸಮಾಜದಲ್ಲಿ ಸತ್ಯಕ್ಕಿಂತ ಸುಳ್ಳನ್ನು ಸಮರ್ಥಿಸುವವರ ಮಧ್ಯೆ ಆತ್ಮವಿಶ್ವಾಸ ಮತ್ತು ಧೈರ್ಯದಿಂದ ಸತ್ಯವನ್ನೇ ಪ್ರತಿಪಾದಿಸಬೇಕು. ಪ್ರವಾದಿಯವರು ಮಾನವತ್ವದ ನಾಯಕ ಪರಿಪೂರ್ಣ ಸಮಾಜ ಸುಧಾರಕರು ಲೋಕದ ಮಾದರಿಯ ವ್ಯಕ್ತಿಯಾಗಿದ್ದಾರೆ ಎಂದರು ನೆರೆಯವರೊಂದಿಗೆ ಉತ್ತಮ ಸಂಬಂಧ ಇಟ್ಟುಕೊಳ್ಳದೆ ಯಾವುದೇ ಧಾರ್ಮಿಕ ಕೈಂಕರ್ಯ ಮಾಡಿದರೂ ವ್ಯರ್ಥ ಎಂದು ವಾಲ್ಮೀಕಿ ಗುರುಕುಲಾಶ್ರಮ ಜೀರ್ಣೋದ್ಧಾರ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಯು. ಶಿವಾನಂದ ತಿಳಿಸಿದರು.

ಜಗತ್ತಿನ ಎಲ್ಲ ಧರ್ಮಗಳು ಮನುಷ್ಯನ ಮನಸ್ಸನ್ನು ಸಂಸ್ಕರಿಸುವ ವಿಧಾನ ಕಲಿಸಿ ಕೊಟ್ಟಿವೆ .ಆದರೆ ನಾವು ಧರ್ಮದ ಮೂಲ ಉದ್ದೇಶ ಅರಿಯದೆ, ಸ್ವಾರ್ಥ ಸಾಧನೆಗಾಗಿ ಧರ್ಮಗಳನ್ನು ಬಳಸಿಕೊಳ್ಳುತ್ತಿರುವುದು ವಿಪರ್ಯಾಸ ಆದ್ದರಿಂದ ನಾವೆಲ್ಲರೂ ಧರ್ಮದ ತಿರುಳನ್ನು ಅರಿತು ಬಾಳಬೇಕು ಆ ಮೂಲಕ ಭ್ರಾತೃತ್ವದ ಸರ್ವ ಸಮಾನತೆಯ ಸಮಾಜ ನಿರ್ಮಿಸಲು ಎಲ್ಲರೂ ಸಿದ್ದರಾಗಬೇಕೆಂದು. ಎ ಎಸ್ ಎಮ್ ಕಾಲೇಜಿನ ಪ್ರಾಂಶುಪಾಲರಾದ ಡಾ. ಬಿ ಗೋವಿಂದರಾಜ ತಿಳಿಸಿದರು.

ನಿಮ್ಮ ಮಕ್ಕಳು ನಿಮ್ಮ ಮಾತನ್ನು ಪಾಲಿಸುವವರಾಗಿದ್ದರೆ ಅದೇ ನೀವು ಮಾಡಿದ ಪುಣ್ಯದ ಸಂಪಾದನೆ. ಮಕ್ಕಳನ್ನು ಸಂಸ್ಕಾರವಂತರನ್ನಾಗಿ ಬೆಳೆಸುವುದು ಪ್ರತಿಯೊಬ್ಬ ತಂದೆ ತಾಯಿಗಳ ಕರ್ತವ್ಯವಾಗಿದೆ ಎಂದು ತಿಳಿಸಿದರು.

ನಗರದ ಸರ್ ಖಾಜಿಗಳಾದ ಮೊಹಮ್ಮದ್ ಸಿದ್ದಿಕಿ ಮಾತನಾಡಿ ಆರ್ಥಿಕ ಮತ್ತು ರಾಜಕೀಯ ಸ್ವಾರ್ಥಗಳಿಗೆ ಇಂದು ಪ್ರಪಂಚದಲ್ಲಿ ಕೊಲೆ ಸುಲಿಗೆ ಯುದ್ಧ ನಡೆಯುತ್ತಿವೆಯೇ ಹೊರತು ಧಾರ್ಮಿಕ ಕಾರಣಗಳಿಂದಾಗಿ ಅಲ್ಲ ಎಲ್ಲರೂ ಕೂಡಿ ಬಾಳುವುದು ಇಂದಿನ ತುರ್ತಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಡಾ. ನಿಷ್ಠಿ ರುದ್ರಪ್ಪ ತಿಳಿಸಿದರು. ವೇದಿಕೆಯಲ್ಲಿ ಸನ್ಮಾರ್ಗ ಗೆಳೆಯರ ಬಳಗದ ಕಾರ್ಯದರ್ಶಿಗಳಾದ ಕಪ್ಪಗಲ್ಲು ಬಿ ಚಂದ್ರಶೇಖರ ಆಚಾರ್, ಬೌದ್ಧ ಧರ್ಮ ಗುರುಗಳಾದ ಕಮಲ ರತ್ನ ಬಂತೇಜಿ, ಶ್ವೇತಾಂಬರ ತೇರಾ ಪಂತ್ ಅಧ್ಯಕ್ಷರಾದ ಹರೀಶ್ ಜೈನ್, ಸಿಕ್ ಸಮಾಜದ ಮುಖಂಡರಾದ ಸುರೀಂದರ್ ಸಿಂಗ್, ಜಮಾತೆ ಇಸ್ಲಾಮಿ ಹಿಂದ್ ವಲಯ ಸಂಚಾಲಕರಾದ ಅನ್ವರ್ ಪಾಷ ಉಮರಿ, ಜಿಲ್ಲಾ ಸಂಚಾಲಕರಾದ ಸೈಯದ್ ಜೈನುಲ್ಲಾಬಿದೀನ್ ಖಾದ್ರಿ, ತಾಲೂಕು ಘಟಕದ ಅಧ್ಯಕ್ಷ ಸೈಯದ್ ನಿಜಾಮುದ್ದೀನ್ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಮುಹಮ್ಮದ್ ಖಲೀಲ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಸೈಯದ್ ಮಿಸ್ಬಾಹುದ್ದೀನ್ ಖಾದ್ರಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಪ್ರಜಾಪ್ರಭುತ್ವದ ಮೌಲ್ಯ ಅರಿತು ಉತ್ತಮ ನಾಯಕತ್ವ ಬೆಳೆಸಿಕೊಳ್ಳಿ ಅಶೋಕ್ ಶಿಗ್ಗಾವಿ

ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ವಿದ್ಯಾರ್ಥಿ ದೆಸೆಯಿಂದಲೇ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಅರ್ಥಮಾಡಿಕೊಂಡು, ಉತ್ತಮ ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳಬೇಕು. ಈ ಉದ್ದೇಶದಿಂದ ಸರ್ಕಾರ ಯುವ ಸಂಸತ್ ಕಾರ್ಯಕ್ರಮವನ್ನು ಆಯೋಜಿಸಿದೆ ಎಂದು ತಹಶೀಲ್ದಾರ್ ಅಶೋಕ್ ಶಿಗ್ಗಾವಿ ಹೇಳಿದರು.

ಪಟ್ಟಣದ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಮಂಗಳವಾರ ತಾಲೂಕು ಆಡಳಿತದ ವತಿಯಿಂದ ಆಯೋಜಿಸಿದ್ದ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಾಗೂ ಯುವ ಸಂಸತ್ ಸ್ಪರ್ಧೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ವಿಶೇಷ ಉಪನ್ಯಾಸ ನೀಡಿದ ಲೇಖಕ ಕಿಶನ್ ರಾವ್ ಕುಲಕರ್ಣಿ ಮಾತನಾಡಿ, ಪ್ರತಿಯೊಬ್ಬ ನಾಗರಿಕನಿಗೂ ತನ್ನ ಹಕ್ಕುಗಳನ್ನು ಚಲಾಯಿಸುವ ಹಾಗೂ ತನ್ನ ಸರ್ಕಾರವನ್ನು ಆಯ್ಕೆ ಮಾಡಿಕೊಳ್ಳುವ ಅವಕಾಶ ಕಲ್ಪಿಸಿರುವುದು ಪ್ರಜಾಪ್ರಭುತ್ವ ವ್ಯವಸ್ಥೆಯ



ಹೆಗ್ಗಳಿಕೆಯಾಗಿದೆ. ವಿಶ್ವಸಂಸ್ಥೆ 2007ರಲ್ಲಿ ಪ್ರಜಾಪ್ರಭುತ್ವ ದಿನ ಆಚರಿಸಲು ಘೋಷಿಸಿತು. ಪ್ರತಿವರ್ಷ ಸೆಪ್ಟೆಂಬರ್ 15ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯುವುದು, ಜನರಲ್ಲಿ ಜಾಗೃತಿ ಮೂಡಿಸುವುದು ಹಾಗೂ ಪ್ರಜಾಸತ್ತಾತ್ಮಕ ತತ್ವಗಳನ್ನು ಬಲಪಡಿಸುವುದು ಈ ದಿನದ ಉದ್ದೇಶವಾಗಿದೆ ಎಂದರು.

ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ತುಗ್ಗಲಪ್ಪ ಎಚ್. ದೇಸಾಯಿ ಮಾತನಾಡಿ, ವಿದ್ಯಾರ್ಥಿಗಳು ಪ್ರಜಾಪ್ರಭುತ್ವದ ಆಶಯಗಳನ್ನು ಅರಿತು ಸಂವಿಧಾನದ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು. ಪದವಿ ಕಾಲೇಜಿನ ವಿದ್ಯಾವತಿ ಗೋಟೂರು ಮಾತನಾಡಿ, ಪ್ರಜಾಪ್ರಭುತ್ವದ ಯಶಸ್ಸಿಗೆ ಜಾಗೃತ ಹಾಗೂ ಜವಾಬ್ದಾರಿಯುತ ನಾಗರಿಕರ ಪಾತ್ರ ಮಹತ್ವದ್ದಾಗಿದೆ ಎಂದರು. ತಾಲೂಕು ವಕೀಲರ ಸಂಘದ ಅಧ್ಯಕ್ಷ ಎಚ್.ಆರ್. ನಾಯಕ್ ಮಾತನಾಡಿ, ಸಂವಿಧಾನ ನೀಡಿರುವ ಹಕ್ಕುಗಳ ಜೊತೆಗೆ ಪ್ರತಿಯೊಬ್ಬರೂ ತಮ್ಮ ಕರ್ತವ್ಯಗಳನ್ನೂ ಅರಿತುಕೊಳ್ಳಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಮಾಲಾ ಪಡಸಾಸಾಲಿಮನಿ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಸಂವಿಧಾನ, ಪ್ರಜಾಪ್ರಭುತ್ವ ಹಾಗೂ ನಾಯಕತ್ವದ ಕು–ರಿತು ಅರಿವು ಮೂಡಿಸಲು ಯುವ ಸಂಸತ್ ಕಾರ್ಯಕ್ರಮಗಳು ಸಹಕಾರಿಯಾಗಿವೆ ಎಂದರು.

ಪ್ರಭಾರಿ ಕ್ಷೇತ್ರ ಶಿಕ್ಷಣಾಧಿಕಾರಿ ಯಮನಪ್ಪ ಚೂರಿ ಮಾತನಾಡಿದರು. ಬಸವರಾಜ ಚಳಗೇರಿ, ಮಲ್ಲಿಕಾರ್ಜುನ ಮೇಟಿ, ಕಳಕಪ್ಪ ಹುಲಿ ಸೇರಿದಂತೆ ಇತರರು ಉಪಸ್ಥಿತರಿದ್ದರು. ಸಂವಿಧಾನದ ಪೀಠಿ–ಕೆಯನ್ನು ಸಾಮೂಹಿಕವಾಗಿ ಓದುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ತಾಲೂಕು ಆಡಳಿತ, ತಾಲೂಕು ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಉನ್ನತ ಶಿಕ್ಷಣ ಇಲಾಖೆ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ ಹಾಗೂ ತಾಲೂಕು ಕಾನೂನು ಸೇವೆಗಳ ಪ್ರಾಧಿಕಾರದ ಸಹಯೋಗದಲ್ಲಿ ಕಾರ್ಯಕ್ರಮ ನಡೆಯಿತು. ಡಾ. ನಾಗರಾಜ ಹೀರ ಸ್ವಾಗತಿಸಿದರು. ಹನುಮಂತಪ್ಪ ಚೌದರಿ ಕಾರ್ಯಕ್ರಮ ನಿರ್ವಹಿಸಿದರು.

ವಚನ ದರ್ಶನ

ಎನ್ನ ಕಾಯವ ದಂಡಿಗೆಯ ಮಾಡಯ್ಯಾ ಎನ್ನ ಶಿರವ ಸೋರೆಯ ಮಾಡಯ್ಯಾ ಎನ್ನ ನರವ ತಂತಿಯ ಮಾಡಯ್ಯಾ, ಎನ್ನ ಬೆರಳ ಕಡ್ಡಿಯ ಮಾಡಯ್ಯಾ ಬತ್ತೀಸ ರಾಗವ ಹಾಡಯ್ಯಾ, ಉರದಲೊತ್ತಿ ಬಾರಿಸು,ಕೂಡಲಸಂಗಮದೇವಾ

12 ನೇ ಶತಮಾನದ ಶರಣರಾದ ವಿಶ್ವಗುರು ಬಸವಣ್ಣನವರ ಅತ್ಯಂತ ಪ್ರಸಿದ್ಧವಾದ ಹಾಗೂ ಸುಂದರವಾದ ವಚನವಾಗಿದೆ. ಈ ವಚನದಲ್ಲಿ ವಿಶ್ವಗುರು ಬಸವಣ್ಣನವರು ತಮ್ಮ ಸಂಪೂರ್ಣ ದೇಹವನ್ನು ದೇವರ ಸೇವೆಗೆ ಅರ್ಪಿಸಿಕೊಳ್ಳುವಂತೆ ಮತ್ತು ದೇವನೇ ಅದನ್ನು ನುಡಿಸುವಂತೆ ಬೇಡಿಕೊಂಡಿದ್ದಾರೆ.

ಈ ವಚನದಲ್ಲಿ ಬಸವಣ್ಣನವರು ತಮ್ಮನ್ನು ತಾವು ದೇವರ ಕೈಯಲ್ಲಿರುವ 'ದಂಡಿಗೆ' ಇಂದಿನ ವೀಣೆಯಂತಹ ಒಂದು ತಂತಿ ವಾದ್ಯ ಮಾಡಲು ಕೇಳಿಕೊಳ್ಳುತ್ತಿದ್ದಾರೆ.

ದೇಹ ಮತ್ತು ಶಿರ ನನ್ನ ದೇಹವನ್ನು ವಾದ್ಯದ ದಂಡವನ್ನಾಗಿಯೂ, ನನ್ನ ತಲೆಯನ್ನು ವಾದ್ಯಕ್ಕೆ ಬಳಸುವ ಒಣಗಿದ ಸೋರೆಕಾಯಿಯ ಬುರುಡೆಯನ್ನಾಗಿಯೂ ಮಾಡು.ನರ ಮತ್ತು ಬೆರಳು: ನನ್ನ ದೇಹದ ನರಗಳನ್ನು ಆ ವಾದ್ಯದ ತಂತಿಗಳನ್ನಾಗಿ ಮಾಡು ಮತ್ತು ನನ್ನ ಬೆರಳುಗಳನ್ನೇ ಅದನ್ನು ನುಡಿಸುವ ಕಡ್ಡಿಯನ್ನಾಗಿ ಪರಿವರ್ತಿಸು.ಸಂಗೀತದ ನಾದ: ಹೇ ಕೂಡಲಸಂಗಮದೇವ, ನನ್ನನ್ನು ನಿನ್ನ ಎದೆಗೆ ಒತ್ತಿ ಹಿಡಿದು, ನಿನಗೆ ಇಷ್ಟ ಬಂದಂತೆ ಮೂವತ್ತೆರಡು ಬತ್ತೀಸ ರಾಗಗಳನ್ನು ಮಂಜುಳವಾಗಿ ನುಡಿಸು. ನನ್ನ ಜೀವನದ ಪ್ರತಿ ಕ್ಷಣವೂ ನಿನ್ನ ನಾದಮಯವಾಗಿರಲಿ ಎಂಬುದು ಇದರ ಆಶಯವಾಗಿದೆ.ಅಂದರೆ, "ನನ್ನಲ್ಲಿ ಯಾವುದೇ ಅಹಂಕಾರ ಉಳಿಯಬಾರದು, ನಾನು ಸಂಪೂರ್ಣವಾಗಿ ನಿನ್ನ ಇಚ್ಛೆಯಂತೆ ನಡೆಯುವ ನಿಮಿತ್ತ ಮಾತ್ರನಾಗಬೇಕು" ಎಂಬ ಪರಮ ಭಕ್ತಿಯ ಶರಣಾಗತಿಯ ಭಾವ ಇಲ್ಲಿದೆ. ಇಂಥಹ ವಚನಗಳು ಮನುಕುಲಕ್ಕೆ ದಾರಿದೀಪವಾಗಿವೆ. ನಾವು ನೀವು ವಚನದ ದಾರಿಯಲ್ಲಿ ಸಾಗೋಣ ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ-ಸಿಂಧನೂರು. 998094144

ಜಾಲಹಳ್ಳಿ ಪಶು ಆಸ್ಪತ್ರೆ ವೈದ್ಯರ ನಿರ್ಲಕ್ಷ್ಯ, ಔಷಧಿ ದುರುಪಯೋಗ ಆರೋಪ: ರೈತ ಸಂಘದಿಂದ ಧರಣಿ


ತಾಲೂಕು ಪಶುವೈದ್ಯಾಧಿಕಾರಿ ಲಿಖಿತ ಭರವಸೆ ಬಳಿಕ ಪ್ರತಿಭಟನೆ ವಾಪಸ್

❏ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ: ದೇವದುರ್ಗ ತಾಲೂಕಿನ ಜಾಲಹಳ್ಳಿ ಗ್ರಾಮದ ಸರ್ಕಾರಿ ಪಶು ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಯ ಕರ್ತವ್ಯಲೋಪ, ಜಾನುವಾರುಗಳಿಗೆ ಸಮರ್ಪಕ ಚಿಕಿತ್ಸೆ ದೊರೆಯದಿರುವುದು ಹಾಗೂ ಸರ್ಕಾರದಿಂದ ಪೂರೈಕೆಯಾಗುವ ಔಷಧಿಗಳ ದುರುಪಯೋಗ ಮತ್ತು ಅಕ್ರಮ ಮಾರಾಟದ ಆರೋಪಗಳನ್ನು ಖಂಡಿಸಿ ಕರ್ನಾಟಕ ಪ್ರಾಂತ ರೈತ ಸಂಘದ ಜಾಲಹಳ್ಳಿ ಗ್ರಾಮ ಸಮಿತಿ ನೇತೃತ್ವದಲ್ಲಿ ಮಂಗಳವಾರ ಪಶು ಆಸ್ಪತ್ರೆಯ ಎದುರು ಧರಣಿ ಪ್ರತಿಭಟನೆ ನಡೆಸಲಾಯಿತು.

ಆಸ್ಪತ್ರೆಯ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ನಿಗದಿತ ಸಮಯಕ್ಕೆ ಕರ್ತವ್ಯಕ್ಕೆ ಹಾಜರಾಗುತ್ತಿಲ್ಲ. ಇದರಿಂದ ಜಾನುವಾರು ಸಾಕಾಣಿಕೆ ಮಾಡುವ ರೈತರಿಗೆ ಸಮಯಕ್ಕೆ ಸರಿಯಾಗಿ ಪಶುವೈದ್ಯಕೀಯ ಸೇವೆ ದೊರೆಯುತ್ತಿಲ್ಲ ಎಂದು ಪ್ರತಿಭಟನಾಕಾರರು ಆರೋಪಿಸಿದರು. ಅಲ್ಲದೆ, ಸರ್ಕಾರದಿಂದ ಜಾನುವಾರುಗಳ ಚಿಕಿತ್ಸೆಗಾಗಿ ಉಚಿತವಾಗಿ ಪೂರೈಕೆಯಾಗುವ ಔಷಧಿಗಳನ್ನು ಆಸ್ಪತ್ರೆಯಿಂದ ಹೊರಗಡೆ ಅಕ್ರಮವಾಗಿ ಮಾರಾಟ ಮಾಡಲಾಗುತ್ತಿದೆ ಎಂಬ ಗಂಭೀರ ಆರೋಪಗಳ ಕುರಿತು ಸೂಕ್ತ ತನಿಖೆ ನಡೆಸಬೇಕು ಎಂದು ರೈತ ಮುಖಂಡರು ಆಗ್ರಹಿಸಿದರು.

ಅರ್ಹತೆಯಿಲ್ಲದ ಸಿಬ್ಬಂದಿಯಿಂದ ಚಿಕಿತ್ಸೆ ಆರೋಪ ಕನಿಷ್ಠ ಅರ್ಹತೆಯಿಲ್ಲದ ಡಿ-ಗ್ರೂಪ್ ಹಾಗೂ ಮೈತ್ರಿ ಸಿಬ್ಬಂದಿಗಳೇ ಜಾನುವಾರುಗಳಿಗೆ ಚಿಕಿತ್ಸೆ ನೀಡುತ್ತಿರುವ ಆರೋಪ ಕೇಳಿಬರುತ್ತಿದ್ದು, ಇದು ರೈತರ ಜಾನುವಾರುಗಳ ಜೀವದೊಂದಿಗೆ ಆಟವಾಡಿದಂತಾಗಿದೆ. ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದರೂ ಇದುವರೆಗೆ ಸೂಕ್ತ ಕ್ರಮ ಕೈಗೊಳ್ಳದಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.



ಪ್ರಮುಖ ಬೇಡಿಕೆಗಳು ವೈದ್ಯಾಧಿಕಾರಿಗಳು ನಿಯಮಿತವಾಗಿ ಆಸ್ಪತ್ರೆಯಲ್ಲಿ ಹಾಜರಿದ್ದು ಜಾನುವಾರುಗಳಿಗೆ ಚಿಕಿತ್ಸೆ ನೀಡಬೇಕು. ಪಶು ಆಸ್ಪತ್ರೆಗೆ ಪೂರೈಕೆಯಾಗುವ ಔಷಧಿಗಳ ಸ್ಟಾಕ್ ಹಾಗೂ ವಿತರಣಾ ವಿವರಗಳನ್ನು ನೋಟಿಸ್ ಬೋರ್ಡ್‌ನಲ್ಲಿ ಸಾರ್ವಜನಿಕರಿಗೆ ಕಾಣುವಂತೆ ಪ್ರಕಟಿಸಬೇಕು. ಉಚಿತ ಔಷಧಿಗಳ ಅಕ್ರಮ ಮಾರಾಟದ ಆರೋಪದ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಬೇಕು. ನಿಯಮಬಾಹಿರವಾಗಿ ಚಿಕಿತ್ಸೆ ನೀಡುತ್ತಿರುವ ಡಿ-ಗ್ರೂಪ್ ಹಾಗೂ ಮೈತ್ರಿ ಸಿಬ್ಬಂದಿಗಳ ವಿರುದ್ಧ ಇಲಾಖಾ ಕ್ರಮ ಕೈಗೊಳ್ಳಬೇಕು. ರೈತರಿಗೆ ಸಮರ್ಪಕ ಪಶುವೈದ್ಯಕೀಯ ಸೇವೆ ಒದಗಿಸುವುದರ ಜೊತೆಗೆ ಹೈನುಗಾರಿಕೆಗೆ ಉತ್ತೇಜನ ನೀಡುವ ಕಾರ್ಯಕ್ರಮಗಳನ್ನು ರೂಪಿಸಬೇಕು.

ಪ್ರತಿಭಟನೆಯ ಸಂದರ್ಭದಲ್ಲಿ ಇಲಾಖೆಯ ಮುಖ್ಯಸ್ಥರು, ತಹಶೀಲ್ದಾರ್ ಹಾಗೂ ಪೊಲೀಸ್ ಇಲಾಖೆಗೆ ಮನವಿ ಪತ್ರ ಸಲ್ಲಿಸಲಾಯಿತು. ಕರ್ನಾಟಕ ಪ್ರಾಂತ ರೈತ ಸಂಘದ ಜಾಲಹಳ್ಳಿ ಗ್ರಾಮ ಸಮಿತಿ ಅಧ್ಯಕ್ಷ ಹನುಮಂತ ಮಡಿವಾಳ, ಕಾರ್ಯದರ್ಶಿ ರಂಗನಾಥ ಬುಂಕಲದೊಡ್ಡಿ, ಗ್ರಾಮ ಪಂಚಾಯತ್ ಸದಸ್ಯರಾದ, ರಮೇಶ್ ತೆಗ್ಗೆಳ್ಳಿ, ಕೃಷಿ ಕೂಲಿ ಕಾರರ ಸಂಘಟನೆ ಅಧ್ಯಕ್ಷ ಲಿಂಗಣ್ಣ ನಾಯಕ ಮಕಾಶಿ,ದುರುಗಪ್ಪ ವಠಾರ, ಬಸವರಾಜ್ ವಂದಲಿ, ಬಸವರಾಜ್ ಲಿಂಗದಹಳ್ಳಿ, ಸುರೇಶ್ ಗೌಡ, ಚಂದ್ರು ನಾಯಕ, ನರೇಶ್, ರಂಗಪ್ಪ ಕೋರಬುರ್, ಭೀಮಶಪ್ಪ, ದೇವರಾಯ, ನರಸಣ್ಣ ದರೇಪುರ್,ಮಲ್ ಯ್ಯ ಗೌಡುರ್,ವೆಂಕಟೇಶ್ ತ್ಯಾಪಿಲಿ,ಚನ್ನಬಸವ ಕಾವಲಿ ಸೇರಿದಂತೆ ರೈತ ಮುಖಂಡರು ಹಾಗೂ ಗ್ರಾಮಸ್ಥರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ತಾಲೂಕು ಪಶುವೈದ್ಯಾಧಿಕಾರಿ ಮುಕ್ತಾರ್ ಸಾಬ್ ಅವರು ರೈತ ಮುಖಂಡರಿಗೆ ಲಿಖಿತ ಭರವಸೆ ನೀಡಿದ ಹಿನ್ನೆಲೆಯಲ್ಲಿ ಪ್ರತಿಭಟನೆಯನ್ನು ವಾಪಸ್ ಪಡೆಯಲಾಯಿತು.

1ನೇ ಪುಟದಿಂದ....

1ನೇ ಪುಟದಿಂದ....

ರೈತ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಏಕೆಂದರೆ ಸರ್ಕಾರಕ್ಕೆ ಈ ಹೋರಾಟದ ಮೂಲಕ ಬಿಸಿ ಮುಟ್ಟಿಸಬೇಕಾಗಿದೆ. ಈ ಹೋರಾಟದಲ್ಲಿ ನಮ್ಮ ಪ್ರಮುಖ ಮೂರು ಬೇಡಿಕೆಗಳಿವೆ ಒಂದು ರೈತರ ಸಂಪೂರ್ಣ ಸಾಲಮನ್ನಾ, ಎರಡನೆಯದು ಮೇವು ಬ್ಯಾಂಕ್ ಸ್ಥಾಪಿಸುವುದು ಇನ್ನು ಮೂರನೇಯದಾಗಿ ಇನ್ಸೂರೆನ್ಸ್ ಹಣವನ್ನು ರೈತರಿಗೆ ಬರುವಂತೆ ಮಾಡುವುದಾಗಿದೆ.

ನಾನು ಮತ್ತು ನಡಹಳ್ಳಿ ಅವರು ಮಾಜಿಗಳಾಗಿದ್ದೇವೆ ರಾಜುಗೌಡರು ಹಾಲಿ ಶಾಸಕರಾಗಿದ್ದು ಅವರು ಸದನದಲ್ಲಿ ಈ ಕುರಿತು ಹೋರಾಟವನ್ನು ನಡೆಸಬೇಕು ಎಂದು ಹೇಳಿದರು. ಮುಖಂಡರಾದ ಮುನ್ನಾಧಣಿ ನಾಡಗೌಡ, ಬಸನಗೌಡ ಮಾಡಗಿ, ಮಡು ಸೌಕಾರ ಬಿರಾದಾರ, ಸಿದ್ದು ಬುಳ್ಳಾ ಹಾಗೂ ಬಸನಗೌಡ ಒಣಕ್ಯಾಳ ಮಾತನಾಡಿ ಸರ್ಕಾರದ ನಡೆಯನ್ನು ತೀವ್ರವಾಗಿ ಖಂಡಿಸಿ ಸಪ್ಟೆಂಬರ್ 17 ರಿಂದ ಆರಂಭವಾಗುವ ಧರಣಿಗೆ ಎಲ್ಲರೂ ಸಹಕರಿಸಿ ಎಂದು ಕೇಳಿಕೊಂಡರು. ಪೂರ್ವಭಾವಿ ಸಭೆಯಲ್ಲಿ ಗಣ್ಯ ವರ್ತಕರಾದ ಎಂ.ಎಸ್.ಸರಶೆಟ್ಟಿ,ಕೆ.ಎಸ್. ಮುರಾಳ, ಕಾಶಿನಾಥ ಸಜ್ಜನ, ನೀಲಪ್ಪ ಬಬಲೇಶ್ವರ,ಡಿ.ಕೆ.ಪಾಟೀಲ(ಮಿಣಜಗಿ), ಮುಖಂಡರಾದ ಸಾಹೇಬಗೌಡ ವಣಿಕ್ಯಾಳ, ಪ್ರಭುಗೌಡ ಬಿರಾದಾರ ಅಸ್ಕಿ, ಮಲ್ಲನಗೌಡ ಬಿರಾದಾರ(ಕೊಡಗನೂರ), ಸಾಹೇಬಣ್ಣ ಆಲ್ಯಾಳ, ರಾಜುಗೌಡ ಕೋಳೂರ, ಎಂ ಎಂ ಪೊಲೀಸ್ ಪಾಟೀಲ, ರಾಜುಗೌಡ ಗುಂಡಕನಾಳ, ಜೈಸಿಂಗ್ ಮೂಲಿಮನಿ, ಶಿವಶಂಕರ ಹಿರೇಮಠ, ನಿಂಗಣ್ಣ ಕುಂಟೋಜಿ, ಪಟ್ಟಣದ ಸರ್ವ ಸಮಾಜದ ಅಧ್ಯಕ್ಷರು, ವಿವಿಧ ರೈತ ಪರ ಸಂಘಟನೆಗಳ ಮುಖ್ಯಸ್ಥರು ಇದ್ದರು.

ಮಾತೆ ಮರಿಯಮ್ಮನವರ ಜಾತ್ರಾ ಮಹೋತ್ಸವದಲ್ಲಿ ರಾಜಾ ರಾಮಚಂದ್ರ ನಾಯಕ ಭಾಗಿ ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಧರ್ಮಗುರುಗಳಿಗೆ ಗೌರವ ಸಮರ್ಪಣೆ

❏ ನೈಜ್ಯ ದೆಸೆ ನ್ಯೂಸ್

ಮಾನ್ವಿ: ಪಟ್ಟಣದ ಕೊನಾಪೂರ ಪೇಟೆಯಲ್ಲಿರುವ ಸೇಂಟ್ ಮೇರಿ ಚರ್ಚ್‌ನಲ್ಲಿ ಮಾತೆ ಮರಿಯಮ್ಮನವರ ವಾರ್ಷಿಕ ಜಾತ್ರಾ ಮಹೋತ್ಸವದ ಅಂಗವಾಗಿ ಇಂದು ಕೃತಜ್ಞತಾ ದಿವ್ಯ ಬಲಿಪೂಜೆ ಹಾಗೂ ಪ್ರಬೋಧನೆ ಕಾರ್ಯಕ್ರಮವನ್ನು ಭಕ್ತಿಭಾವದಿಂದ ನೆರವೇರಿಸಲಾಯಿತು.

ಜಾತ್ರಾ ಮಹೋತ್ಸವದ ಅಂಗವಾಗಿ ಆಯೋಜಿಸಿದ್ದ ವಿಶೇಷ ಧಾರ್ಮಿಕ ಕಾರ್ಯಕ್ರಮದಲ್ಲಿ ಜೆಡಿಎಸ್ ಯುವ ಘಟಕದ ರಾಜ್ಯ ಉಪಾಧ್ಯಕ್ಷರಾದ ಶ್ರೀ ರಾಜಾ ರಾಮಚಂದ್ರ ನಾಯಕ ಅವರು ಭಾಗವಹಿಸಿ, ಕೃತಜ್ಞತಾ ದಿವ್ಯ ಬಲಿಪೂಜೆಯಲ್ಲಿ ಪಾಲ್ಗೊಂಡರು. ಈ ಸಂದರ್ಭದಲ್ಲಿ ಚರ್ಚ್‌ನಲ್ಲಿ ನಡೆದ ವಿಶೇಷ ಪ್ರಾರ್ಥನೆ ಹಾಗೂ ಪ್ರಬೋಧನೆ ಕಾರ್ಯಕ್ರಮದಲ್ಲಿ ಭಾಗವಹಿಸಿ, ಭಕ್ತರೊಂದಿಗೆ ಧಾರ್ಮಿಕ ಕಾರ್ಯಕ್ರಮದ ಪಾವಿತ್ರ್ಯವನ್ನು ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಬಳ್ಳಾರಿ ಬಿಷಪ್ ಹೆನ್ರಿ ಡಿಸೋಜಾ ಅವರು ಉಪಸ್ಥಿತರಿದ್ದು, ಧಾರ್ಮಿಕ ಸಂದೇಶ ಹಾಗೂ ಪ್ರಬೋಧನೆ ನೀಡಿದರು. ಸೇಂಟ್ ಮೇರಿ ಚರ್ಚ್‌ನ ವಂ. ಫಾ. ವಿನ್ಸೆಂಟ್ ಸುರೇಶ್ ಸೇರಿದಂತೆ ಧರ್ಮಗುರುಗಳು ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿದರು. ಈ ಸಂದರ್ಭದಲ್ಲಿ ರಾಜಾ ರಾಮಚಂದ್ರ ನಾಯಕ ಅವರು ಬಳ್ಳಾರಿ ಬಿಷಪ್ ಹೆನ್ರಿ ಡಿಸೋಜಾ ಹಾಗೂ ವಂ. ಫಾ. ವಿನ್ಸೆಂಟ್ ಸುರೇಶ್ ಸೇರಿದಂತೆ ಧರ್ಮಗುರುಗಳನ್ನು ಸನ್ಮಾನಿಸಿ ಗೌರವ ಸಲ್ಲಿಸಿದರು. ಧರ್ಮಗುರುಗಳ ಆಶೀರ್ವಾದ ಪಡೆದು, ಜಾತ್ರಾ ಮಹೋತ್ಸವದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು.



ಸರ್ವಧರ್ಮ ಸೌಹಾರ್ದತೆ, ಶಾಂತಿ ಮತ್ತು ಸಹೋದರತ್ವದ ಸಂದೇಶ ಮಾನ್ವಿ ತಾಲೂಕು ವಿವಿಧ ಧರ್ಮ, ಜಾತಿ ಹಾಗೂ ಸಮುದಾಯಗಳ ಜನರು ಪರಸ್ಪರ ಸಹಬಾಳ್ವೆಯಿಂದ ಬದುಕುತ್ತಿರುವ ಸೌಹಾರ್ದತೆಯ ನೆಲವಾಗಿದೆ. ಇಂತಹ ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳಲ್ಲಿ ಎಲ್ಲರೂ ಭಾಗವಹಿಸುವ ಮೂಲಕ ಪರಸ್ಪರ ಗೌರವ, ಸ್ನೇಹ ಮತ್ತು ಸೌಹಾರ್ದತೆಯನ್ನು ಮತ್ತಷ್ಟು ಬಲಪಡಿಸಬೇಕು ಎಂಬ ಸಂದೇಶ ಕಾರ್ಯಕ್ರಮದಲ್ಲಿ ವ್ಯಕ್ತವಾಯಿತು.

ಮಾತೆ ಮರಿಯಮ್ಮನವರ ವಾರ್ಷಿಕ ಜಾತ್ರಾ ಮಹೋತ್ಸವದ ಅಂಗವಾಗಿ ನಡೆದ ಧಾರ್ಮಿಕ ಕಾರ್ಯಕ್ರಮದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಚರ್ಚ್ ಆವರಣದಲ್ಲಿ ಭಕ್ತಿಭಾವದ ವಾತಾವರಣ ನಿರ್ಮಾಣವಾಗಿತ್ತು.

ಈ ಸಂದರ್ಭದಲ್ಲಿ ಜೆಡಿಎಸ್ ಪಕ್ಷದ ಮಾನ್ವಿ ತಾಲೂಕು ಅಧ್ಯಕ್ಷ ಈರಣ್ಣ ಮರ್ಲಟ್ಟಿ, ನಗರ ಘಟಕದ ಅಧ್ಯಕ್ಷ ಹೆಚ್. ಮೌನೇಶ್ ಗೌಡ, ಪಿ. ರವಿಕುಮಾರ್, ವಕೀಲರು, ಅನಿಲ್ ಕುಮಾರ್ ಬಂಡಾರಿ, ಮೌಲಸಾಬ್, ಬಸವರಾಜ್ ಸ್ವಾಮಿ, ಜಯಕುಮಾರ್ ಸೇರಿದಂತೆ ಜೆಡಿಎಸ್ ಮುಖಂಡರು, ಕಾರ್ಯಕರ್ತರು, ಧರ್ಮಗುರುಗಳು, ಭಕ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು. ಇದನ್ನು ಬೇಕಿದ್ದರೆ "ರಾಜಾ ರಾಮಚಂದ್ರ ನಾಯಕ ಅವರ ಸೌಹಾರ್ದತಾ ನಡೆ" ಎಂಬ ಹೆಚ್ಚು ರಾಜಕೀಯವಾಗಿ ಪರಿಣಾಮಕಾರಿ ಶೀರ್ಷಿಕೆಯಲ್ಲಿ ಕೂಡ ರೂಪಿಸಬಹುದು.

ಮಕ್ಕಳಲ್ಲಿ ನೈತಿಕತೆ, ಉತ್ತಮ ಚಾರಿತ್ರ್ಯ ಬೆಳೆಸುವುದು CIO ಉದ್ದೇಶ

ಸೀರತ್-ಉನ್-ನಬಿ ಅಭಿಯಾನದ ಸಮಾರೋಪ: ಮಕ್ಕಳ ಸಕ್ರಿಯ ಭಾಗವಹಿಸುವಿಕೆಗೆ ಮೆಚ್ಚುಗೆ

❏ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಮಕ್ಕಳಲ್ಲಿ ಉತ್ತಮ ನೈತಿಕ ಮೌಲ್ಯಗಳು, ಚಾರಿತ್ರ್ಯ ಹಾಗೂ ಮಾನವೀಯ ಗುಣಗಳನ್ನು ಬೆಳೆಸುವ ಮೂಲಕ ಅವರನ್ನು ಉತ್ತಮ ಮುಸ್ಲಿಮರು ಮಾತ್ರವಲ್ಲದೆ ಉತ್ತಮ ನಾಗರಿಕರನ್ನಾಗಿ ರೂಪಿಸುವ ಉದ್ದೇಶದಿಂದ ಮಕ್ಕಳ ಇಸ್ಲಾಮಿಕ್ ಸಂಸ್ಥೆ (CIO) ವತಿಯಿಂದ ವಿವಿಧ ಶೈಕ್ಷಣಿಕ, ಧಾರ್ಮಿಕ, ಸಾಮಾಜಿಕ ಹಾಗೂ ಪರಿಸರಾಧಾರಿತ ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸಲಾಗುತ್ತಿದೆ ಎಂದು ಕಾರ್ಯಕ್ರಮದಲ್ಲಿ ತಿಳಿಸಲಾಯಿತು.

ಜಮಾಅತೆ-ಇ-ಇಸ್ಲಾಮಿ ಹಿಂದ್‌ನ ಮಹಿಳಾ ವಿಭಾಗದ ಮೇಲ್ವಿಚಾರಣೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮಕ್ಕಳ ಇಸ್ಲಾಮಿಕ್ ಸಂಸ್ಥೆಯು 5 ರಿಂದ 18 ವರ್ಷ ವಯಸ್ಸಿನ ಬಾಲಕ?ಬಾಲಕಿಯರಿಗಾಗಿ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತಿದೆ. ಮಕ್ಕಳಲ್ಲಿ ಅಡಗಿರುವ ಪ್ರತಿಭೆಗಳನ್ನು ಗುರುತಿಸಿ, ಅವುಗಳನ್ನು ಹೊರತರುವುದರ ಜೊತೆಗೆ ಉತ್ತಮ ಚಿಂತನೆ, ಶಿಸ್ತು, ನೈತಿಕತೆ, ಜವಾಬ್ದಾರಿ ಹಾಗೂ ಸಮಾಜದ ಬಗ್ಗೆ ಕಾಳಜಿ ಬೆಳೆಸುವುದು ಸಂಸ್ಥೆಯ ಪ್ರಮುಖ ಉದ್ದೇಶವಾಗಿದೆ.

CIO ವತಿಯಿಂದ ಸಾಪ್ತಾಹಿಕ ಕೂಟಗಳು, ಸೀರತ್-ಉನ್-ನಬಿ ಕಾರ್ಯಕ್ರಮಗಳು, ಬೇಸಿಗೆ ಇಸ್ಲಾಮಿಕ್ ಕೋರ್ಸ್‌ಗಳು, ಮರ ನೆಡುವ ಅಭಿಯಾನ, ಜಲ ಸಂರಕ್ಷಣಾ ಅಭಿಯಾನ, ಪರಿಸರ ಜಾಗೃತಿ ಕಾರ್ಯಕ್ರಮಗಳು ಸೇರಿದಂತೆ ವಿವಿಧ ಸಾಮಾಜಿಕ ಮತ್ತು ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ. ಇದರ ಜೊತೆಗೆ ಮಕ್ಕಳ ಪ್ರತಿಭೆಯನ್ನು ಗುರುತಿಸುವ ನಿಟ್ಟಿನಲ್ಲಿ ಬರವಣಿಗೆ ಸ್ಪರ್ಧೆ, ಭಾಷಣ ಸ್ಪರ್ಧೆ, ಚಿತ್ರಕಲಾ ಸ್ಪರ್ಧೆ, ಇಸ್ಲಾಮಿಕ್ ರಸಪ್ರಶ್ನೆ, ವಿವಿಧ ಆಟಗಳು ಹಾಗೂ ಜ್ಞಾನಾಧಾರಿತ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದೆ.

ಮಕ್ಕಳ ಪ್ರತಿಭೆಯನ್ನು ಕೇವಲ ಸ್ಥಳೀಯ ಮಟ್ಟಕ್ಕೆ ಸೀಮಿತಗೊಳಿಸದೆ, ತಾಲೂಕು, ಜಿಲ್ಲೆ, ರಾಜ್ಯ ಹಾಗೂ ರಾಷ್ಟ್ರಮಟ್ಟದ ವಿವಿಧ ಚಟುವಟಿಕೆಗಳಲ್ಲಿ ಭಾಗವಹಿಸುವ ಅವಕಾಶವನ್ನು CIO ಕಲ್ಪಿಸುತ್ತಿದೆ. ಇದರಿಂದ ಮಕ್ಕಳಲ್ಲಿ ಆತ್ಮವಿಶ್ವಾಸ, ನಾಯಕತ್ವ ಗುಣ, ಸೃಜನಶೀಲತೆ ಹಾಗೂ ಸಾಮಾಜಿಕ ಜವಾಬ್ದಾರಿಯ ಮನೋಭಾವ ಬೆಳೆಸುವ ಕಾರ್ಯ ನಡೆಯುತ್ತಿದೆ.



'ಹೃದಯದಲ್ಲಿ ಪ್ರೀತಿ, ಕ್ರಿಯೆಯಲ್ಲಿ ಸೀರತ್' ಅಭಿಯಾನ ಇದೇ ಉದ್ದೇಶದ ಭಾಗವಾಗಿ ಸಿಂಧನೂರು ನಗರದಲ್ಲಿ ಮಕ್ಕಳ ಇಸ್ಲಾಮಿಕ್ ಸಂಸ್ಥೆಯ ಸಹಯೋಗದಲ್ಲಿ "ಹೃದಯದಲ್ಲಿ ಪ್ರೀತಿ, ಕ್ರಿಯೆಯಲ್ಲಿ ಸೀರತ್" ಎಂಬ ಸಂದೇಶದೊಂದಿಗೆ ಸೀರತ್-ಉನ್-ನಬಿ ಅಭಿಯಾನವನ್ನು ಹಮ್ಮಿಕೊಳ್ಳಲಾಗಿತ್ತು. ಅಭಿಯಾನದ ಅಂಗವಾಗಿ ಮಕ್ಕಳಿಗಾಗಿ ವಿವಿಧ ಸ್ಪರ್ಧೆಗಳು, ಆಟಗಳು, ರಸಪ್ರಶ್ನೆ ಸೇರಿದಂತೆ ಹಲವು ಚಟುವಟಿಕೆಗಳನ್ನು ನಡೆಸಲಾಯಿತು.

ಅಭಿಯಾನದ ಅಂತಿಮ ಕಾರ್ಯಕ್ರಮವು ಸೆಪ್ಟೆಂಬರ್ 14ರಂದು ಸಿಂಧನೂರು ನಗರದ ಮಸ್ಜಿದ್ - ಏ - ಹುಧಾ ಪಟೇಲ್ ವಾಡಿಯಲ್ಲಿ ನಡೆಯಿತು. ಕಾರ್ಯಕ್ರಮದಲ್ಲಿ ಮಕ್ಕಳು ಉತ್ಸಾಹದಿಂದ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿದರು. ವಿವಿಧ ಸ್ಪರ್ಧೆಗಳಲ್ಲಿ ಉತ್ತಮ ಸಾಧನೆ ಮಾಡಿದ ಮಕ್ಕಳಿಗೆ ಬಹುಮಾನ ಹಾಗೂ ಪ್ರೋತ್ಸಾಹ ನೀಡಲಾಯಿತು.

ಕಾರ್ಯಕ್ರಮವು ಹಮೂದ್ ಅಲಿ ಅವರ ಪಠಣದೊಂದಿಗೆ ಆರಂಭವಾಯಿತು. ನಂತರ ಅಖಿಔ ಸದಸ್ಯೆ ಉಮ್ಮು ಅಮರ್ ಅವರು ಸ್ತೋತ್ರವನ್ನು ಪ್ರಸ್ತುತಪಡಿಸಿದರು. ಪ್ರವಾದಿ ಮುಹಮ್ಮದ್ (ಸ) ಅವರ ಜೀವನ ಮಕ್ಕಳಿಗೆ ಮಾದರಿಯಾಗಲಿ ಕಾರ್ಯಕ್ರಮದ ಆರಂಭಿಕ ಮಾತುಗಳಲ್ಲಿ ಅಖಿಔ ಸ್ಥಳೀಯ ಅಧ್ಯಕ್ಷೆ ರಿಜ್ವಾನಾ ಬೇಗಂ ಅವರು ಮಹಿಳೆಯರನ್ನು ಉದ್ದೇಶಿಸಿ ಮಾತನಾಡಿ, ಪ್ರವಾದಿ ಮುಹಮ್ಮದ್ (ಸ) ಅವರ ಜೀವನವು ಪ್ರತಿಯೊಬ್ಬರಿಗೂ ಆದರ್ಶ ಮತ್ತು ಮಾದರಿಯಾಗಿದೆ ಎಂದು ಹೇಳಿದರು.

"ನಾವು ಪವಿತ್ರ ಪ್ರವಾದಿ ಮುಹಮ್ಮದ್ (ಸ) ಅವರ ಜೀವನ ಚರಿತ್ರೆಯನ್ನು ತಿಳಿದುಕೊಳ್ಳುವುದರ ಜೊತೆಗೆ ನಮ್ಮ ಮಕ್ಕಳಿಗೂ ಅವರ ಜೀವನ, ಬೋಧನೆಗಳು ಹಾಗೂ ಆದರ್ಶಗಳನ್ನು ಪರಿಚಯಿಸಬೇಕು. ಮಕ್ಕಳು ತಾವು ಪ್ರೀತಿಸುವ ಹಾಗೂ ಆರಾಧಿಸುವ ವ್ಯಕ್ತಿಯ ನಡೆ, ನುಡಿ, ನಡವಳಿಕೆ ಮತ್ತು ಜೀವನಶೈಲಿಯಿಂದ ಪ್ರಭಾವಿತರಾಗುತ್ತಾರೆ. ಆದ್ದರಿಂದ ನಮ್ಮ ಮಕ್ಕಳ ಹೃದಯದಲ್ಲಿ ಪ್ರವಾದಿ ಮುಹಮ್ಮದ್ (ಸ) ಅವರ ಮೇಲಿನ ಪ್ರೀತಿ ಹಾಗೂ ಅವರ ಸುನ್ನತ್‌ಗಳ ಬಗ್ಗೆ ಗೌರವವನ್ನು ಬೆಳೆಸುವುದು ಅತ್ಯಂತ ಅಗತ್ಯವಾಗಿದೆ" ಎಂದು ಅವರು ತಿಳಿಸಿದರು.

ಉತ್ತಮ ಪೀಳಿಗೆಯನ್ನು ನಿರ್ಮಿಸಬೇಕಾದರೆ ಮಕ್ಕಳಿಗೆ ಕೇವಲ ಲೌಕಿಕ ಶಿಕ್ಷಣ ನೀಡುವುದಷ್ಟೇ ಸಾಕಾಗುವುದಿಲ್ಲ. ಅವರ ಹೃದಯದಲ್ಲಿ ನಂಬಿಕೆ, ನೈತಿಕತೆ, ಮಾನವೀಯತೆ, ಶಿಸ್ತು ಮತ್ತು ಉತ್ತಮ ಮೌಲ್ಯಗಳನ್ನು ಬೆಳೆಸಬೇಕು. ಮಕ್ಕಳ ಭವಿಷ್ಯವನ್ನು ರೂಪಿಸುವಲ್ಲಿ ಪೋಷಕರು ಹಾಗೂ ಸಮಾಜದ ಜವಾಬ್ದಾರಿ ಮಹತ್ವದ್ದಾಗಿದೆ ಎಂದು ರಿಜ್ವಾನಾ ಬೇಗಂ ಹೇಳಿದರು.

ಮೊಬೈಲ್, ಇಂಟರ್ನೆಟ್ ಬಳಕೆಯ ನಡುವೆ ಉತ್ತಮ ಮೌಲ್ಯಗಳ ಅಗತ್ಯ ಇಂದಿನ ಆಧುನಿಕ ಯುಗದಲ್ಲಿ ಮೊಬೈಲ್ ಫೋನ್, ಇಂಟರ್ನೆಟ್ ಹಾಗೂ ಸಾಮಾಜಿಕ ಜಾಲತಾಣಗಳು ಜಗತ್ತನ್ನು ಮಕ್ಕಳ ಬೆರಳ ತುದಿಗೆ ತಂದಿವೆ. ತಂತ್ರಜ್ಞಾನವು ಮಕ್ಕಳ ಜ್ಞಾನ ವಿಸ್ತರಣೆಗೆ ಸಹಕಾರಿಯಾಗಿದ್ದರೂ, ಅದರೊಂದಿಗೆ ಹಲವು ಸವಾಲುಗಳೂ ಎದುರಾಗುತ್ತಿವೆ. ಮಕ್ಕಳು ತಮ್ಮ ವಯಸ್ಸಿಗೆ ಸೂಕ್ತವಲ್ಲದ ಹಾಗೂ ಅವರ ನೈತಿಕತೆ ಮತ್ತು ವ್ಯಕ್ತಿತ್ವದ ಮೇಲೆ ಪರಿಣಾಮ ಬೀರುವಂತಹ ವಿಷಯಗಳಿಗೆ ಸುಲಭವಾಗಿ ಒಳಗಾಗುವ ಸಾಧ್ಯತೆ ಇದೆ.

ಇಂತಹ ಪರಿಸ್ಥಿತಿಯಲ್ಲಿ ಮಕ್ಕಳಿಗೆ ಉತ್ತಮ ಚಾರಿತ್ರ್ಯ, ನೈತಿಕತೆ ಮತ್ತು ಮಾನವೀಯ ಮೌಲ್ಯಗಳ ಅಗತ್ಯ ಇನ್ನಷ್ಟು ಹೆಚ್ಚಾಗಿದೆ. ಮಕ್ಕಳ ವ್ಯಕ್ತಿತ್ವವನ್ನು ಉತ್ತಮ ರೀತಿಯಲ್ಲಿ ರೂಪಿಸಲು ಪ್ರವಾದಿ ಮುಹಮ್ಮದ್ (ಸ) ಅವರ ಜೀವನ ಅತ್ಯುತ್ತಮ ಮಾದರಿಯಾಗಿದೆ. ಅವರ ಜೀವನದ ಆದರ್ಶಗಳನ್ನು ಮಕ್ಕಳಿಗೆ ಪರಿಚಯಿಸುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಬುನಾದಿ ಹಾಕಬಹುದು ಎಂದು ರಿಜ್ವಾನಾ ಬೇಗಂ ತಮ್ಮ ಮಾತಿನಲ್ಲಿ ಅಭಿಪ್ರಾಯಪಟ್ಟರು. ಸಿಂಧನೂರಿನ ಏಳು ಘಟಕಗಳ ಸಕ್ರಿಯ ಭಾಗವಹಿಸುವಿಕೆ ಸೀರತ್-ಉನ್-ನಬಿಅಭಿಯಾನದ ಸಮಾರೋಪ ಕಾರ್ಯಕ್ರಮದಲ್ಲಿ ಸಿಂಧನೂರು ನಗರದ ವಿವಿಧ ಭಾಗಗಳ ಈ ಎಲ್ಲಾ ಘಟಕಗಳ ಮಾರ್ಗದರ್ಶಕರು, ಕಾರ್ಯಕರ್ತರು ಹಾಗೂ ಮಕ್ಕಳು ಅಭಿಯಾನದ ಯಶಸ್ಸಿಗೆ ಪ್ರಮುಖ ಪಾತ್ರ ವಹಿಸಿದರು. ಕಾರ್ಯಕ್ರಮದ ಯಶಸ್ಸಿಗೆ ಅಸ್ಮಾ, ಫರ್ಹತ್, ಶಾಜಿಯಾ ಪರ್ವೀನ್, ಯಾಸಿನಾ, ಶಾಹಿದಾ, ನಿಘಾತ್, ತಬಸ್ಸುಮ್, ನಿಖತ್ ಅಫ್ರೋಜ್, ಶಹಜಹಾನ್ ಸೇರಿದಂತೆ ಜಮಾಅತೆ-ಇ-ಇಸ್ಲಾಮಿ ಹಿಂದ್ ಮಹಿಳಾ ಘಟಕದ ಸದಸ್ಯರು ಶ್ರಮಿಸಿದರು.

ಮಕ್ಕಳನ್ನು ವಿವಿಧ ಚಟುವಟಿಕೆಗಳಲ್ಲಿ ತೊಡಗಿಸಿ, ಅವರಲ್ಲಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಕಾರ್ಯಕ್ಕೆ ಪೋಷಕರು ಹಾಗೂ ಮಾರ್ಗದರ್ಶಕರಿಂದ ಉತ್ತಮ ಸ್ಪಂದನೆ ದೊರೆಯಿತು. ಕಾರ್ಯಕ್ರಮದಲ್ಲಿ ಮಕ್ಕಳು ಉತ್ಸಾಹದಿಂದ ಭಾಗವಹಿಸಿ ತಮ್ಮ ಪ್ರತಿಭೆ ಹಾಗೂ ಜ್ಞಾನವನ್ನು ಪ್ರದರ್ಶಿಸಿದ್ದು ವಿಶೇಷವಾಗಿತ್ತು. ಮಕ್ಕಳಲ್ಲಿ ಧಾರ್ಮಿಕ ಮೌಲ್ಯಗಳ ಜೊತೆಗೆ ಸಾಮಾಜಿಕ ಜವಾಬ್ದಾರಿ, ಪರಿಸರ ಸಂರಕ್ಷಣೆ, ಸೇವಾ ಮನೋಭಾವ, ನಾಯಕತ್ವ ಗುಣ ಮತ್ತು ಉತ್ತಮ ನಾಗರಿಕತ್ವದ ಅರಿವು ಬೆಳೆಸುವ ಅಖಿಔಯ ಪ್ರಯತ್ನಕ್ಕೆ ಕಾರ್ಯಕ್ರಮದಲ್ಲಿ ಮೆಚ್ಚುಗೆ ವ್ಯಕ್ತವಾಯಿತು.

ಮುಂದಿನ ದಿನಗಳಲ್ಲಿಯೂ ಮಕ್ಕಳಿಗಾಗಿ ಇನ್ನಷ್ಟು ಪರಿಣಾಮಕಾರಿ ಶೈಕ್ಷಣಿಕ, ಸಾಂಸ್ಕೃತಿಕ, ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಉತ್ತಮ ಚಾರಿತ್ರ್ಯ ಮತ್ತು ಜವಾಬ್ದಾರಿಯುತ ಪೀಳಿಗೆಯನ್ನು ರೂಪಿಸುವ ಕಾರ್ಯವನ್ನು ಮುಂದುವರಿಸುವ ಸಂಕಲ್ಪವನ್ನು ಕಾರ್ಯಕ್ರಮದಲ್ಲಿ ವ್ಯಕ್ತಪಡಿಸಲಾಯಿತು.

ಏಳು CIO ಘಟಕಗಳು ಸಕ್ರಿಯವಾಗಿ ಭಾಗವಹಿಸಿದ್ದವು. ಅವುಗಳೆಂದರೆ:

- ಹುಧಾ ಮಸೀದಿ ಘಟಕ
- PWD ಕ್ಯಾಂಪ್ ಘಟಕ
- ಹಿರೇಲಿಂಗೇಶ್ವರ ಕಾಲೋನಿ ಘಟಕ
- ಗಂಗಾ ನಗರ ಘಟಕ
- ಅತ್ತಾರ ವಾಡಿ ಘಟಕ
- ರೆಹಮತ್ ನಗರ ಘಟಕ
- ಖಿಲಾ ಘಟಕ









OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101